ವಿಜಯಪುರ | ಸಂಪುಟ 02 | ಸಂಚಿಕೆ 142 | ಪುಟ 4 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ
Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com RNI NO: KARKAN/2023/86203 ಭಾನುವಾರ, ಜುಲೈ 28, 2024



"ಮಾನವನು ತನ್ನ ಪ್ರಕೃತಿಯನ್ನು ಕಾಪಾಡಿಕೊಂಡಂತೆ ಈ ಪರಿಸರ ಪ್ರಕೃತಿಯನ್ನು ಗಿಡ ನೆಡುವ ಮೂಲಕ ಉಳಿಸಿ ಬೆಳೆಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ಒಂದೊಂದು ಗಿಡ ನೆಡುವ ಮೂಲಕ ಪರಿಸರವನ್ನು ಶುಭ್ರಗೊಳಿಸುವ ಕಾಯಕವನ್ನು ನಿರ್ವಹಿಸಬೇಕಾಗಿದೆ."

ಉದಯರಶ್ಮಿ ದಿನಪತ್ರಿಕೆ

– ಡಾ ಎಂ.ಬಿ. ಪಾಟೀಲ್

ಬೃಹತ್ ಕೈಗಾರಿಕೆ, ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು

**ಸ್ವಪಕ್ಷದ ವಿರುದ್ಧವೇ ಅಸಮಾಧಾನ ಹೊರ ಹಾಕಿದ ಅರವಿಂದ ಲಿಂಬಾವಳಿ | ಬಿಜೆಪಿ ಅಧ್ಯಕ್ಷರು & ವಿಪಕ್ಷ ನಾಯಕರ ನಡುವೆ ಸಾಮರಸ್ಯದ ಕೊರತೆ**

# ವಿರೋಧ ಪಕ್ಷವಾಗಿ ಬಿಜೆಪಿ ಸಂಪೂರ್ಣ ವಿಫಲ :ಲಿಂಬಾವಳಿ

**ಉದಯರಶ್ಮಿ ನ್ಯೂಸ್**



ಬೆಂಗಳೂರು: ವಿಧಾನಸಭೆಯಲ್ಲಿ ವಿರೋಧ ಪಕ್ಷವಾಗಿ ಬಿಜೆಪಿ ಆಡಳಿತ ಪಕ್ಷವನ್ನು ಎದುರಿಸುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಮಾಜಿ ಸಚಿವ, ಬಿಜೆಪಿಯ ಹಿರಿಯ ನಾಯಕ ಅರವಿಂದ ಲಿಂಬಾವಳಿ ಕಿಡಿಕಾರಿದ್ದಾರೆ.

ವಿಧಾನನ ಮಂಡಲದ ಮುಂಗಾರು ಅಧಿವೇಶನ ಮುಕ್ತಾಯಗೊಂಡ ಬೆನ್ನಲ್ಲೇ ಎಕ್ಸ್‌ನಲ್ಲಿ ಸುದೀರ್ಘ ಬರಹ ಬರೆದು ಅಸಮಾಧ ಹೊರಹಾಕಿರುವ ಲಿಂಬಾವಳಿ ಆಡಳಿತ ಪಕ್ಷದ ಜೊತೆ ಬಿಜೆಪಿ ನಾಯಕರು ಕೈ ಜೋಡಿಸಿದ್ದಾರೆ ಎಂದು ಆರೋಪಿಸಿದ್ದಾರೆ.

"ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನ ಮುಕ್ತಾಯವಾಗಿದೆ. ರಾಜ್ಯ ಸರ್ಕಾರದ ವೈಫಲ್ಯಗಳನ್ನು ಎತ್ತಿ ಹಿಡಿದು ಜನರ ಧ್ವನಿಯಾಗಬೇಕಿದ್ದ ಬಿಜೆಪಿ ವಿರೋಧ ಪಕ್ಷವಾಗಿ ಅದನ್ನು ಮಾಡುವಲ್ಲಿ ಸಂಪೂರ್ಣ ವಿಫಲವಾಗಿದೆ. ಸದನದಲ್ಲಿ ಸರ್ಕಾರದ ಅವ್ಯವಹಾರ, ದುರಾಡಳಿತ, ವೈಫಲ್ಯಗಳನ್ನು ಎತ್ತಿ ಹಿಡಿಯಲು ಅವಕಾಶವಿದ್ದರೂ ನಮ್ಮ ನಾಯಕರು ಈ ಅವಕಾಶವನ್ನು ಬಳಸಿಕೊಳ್ಳುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ" ಎಂದು ಲಿಂಬಾವಳಿ ಹೇಳಿದ್ದಾರೆ.

"ಐಟಿ–ಬಿಟಿ ರಾಜಧಾನಿ ಎಂದೇ ಕರೆಸಿಕೊಳ್ಳುವ, ವಿಜ್ಞಾನ ಕ್ಷೇತ್ರದಲ್ಲಿ ದೇಶಕ್ಕೆ ಮಾದರಿಯಾಗಿರುವ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಡೆಂಗ್ಯೂ ಹಾವಳಿ ಹೆಚ್ಚಾಗಿದೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ಅತಿವೃಷ್ಟಿ ಮತ್ತು ಪ್ರವಾಹದಿಂದಾಗಿ ಲಕ್ಷಾಂತರ ಜನರು ಮನೆ ಕಳೆದುಕೊಂಡಿದ್ದಾರೆ. ನಮ್ಮ ಪಕ್ಷದ ನಾಯಕರಿಗೆ ಈ ಬಗ್ಗೆ ಬೆಳಕು ಚೆಲ್ಲಬೇಕು ಮತ್ತು ರಾಜ್ಯದ ಜನರ ಸಂಕಷ್ಟಗಳನ್ನು ಪ್ರತಿನಿಧಿಸಬೇಕು ಎಂದು ಅನಿಸದಿರುವುದು ವಿಷಾದನೀಯ! ಹಿಂದಿನ ವರ್ಷದ ಬರ ಪರಿಹಾರ ಕೂಡ ಬರದ ಮುನ್ನ ಎಷ್ಟೋ ರೈತರಿಗೆ ತಲುಪಿಲ್ಲ. ಆದರೆ ವಿರೋಧ ಪಕ್ಷದ ನಾಯಕರು ಈ ಬಗ್ಗೆ ಮಾತನಾಡಿಲ್ಲ" ಎಂದಿದ್ದಾರೆ.

"ಶಾಸಕರೂ ಆಗಿರುವ ನಮ್ಮ ಪಕ್ಷದ ಅಧ್ಯಕ್ಷರು ಮತ್ತು ವಿರೋಧ ಪಕ್ಷದ ನಾಯಕರ ನಡುವೆ ಸಾಮರಸ್ಯ, ತಿಳುವಳಿಕೆ ಇಲ್ಲದಿರುವುದು ವಿಷಾದನೀಯ. ಇದು ಆಡಳಿತ ಪಕ್ಷಕ್ಕೆ ಸಂಪೂರ್ಣ ಲಾಭ ಪಡೆಯಲು ಸಹಕಾರಿಯಾಯಿತು. ಸದನದಲ್ಲಿ ಸಿಕ್ಕ ಅವಕಾಶ ಮತ್ತು ಸಮಯವನ್ನು ಸಮರ್ಪಕವಾಗಿ ಬಳಸಿಕೊಳ್ಳದೆ, ಇಡೀ ಅಧಿವೇಶನವನ್ನು ವ್ಯರ್ಥವಾಗಿ ಕಳೆದು, ಇನ್ನೂ ಒಂದು ದಿನ ಬಾಕಿ ಇರುವಾಗ ಸದನದ ಕಲಾಪ ಮೊಟಕುಗೊಳಿಸಿ ಆಡಳಿತ ಪಕ್ಷದ ಜೊತೆ ಕೈಜೋಡಿಸಿರುವ ನಮ್ಮ ಪಕ್ಷದ ನಾಯಕರ ಕ್ರಮ ಪ್ರಶ್ನಾರ್ಹವಾಗಿದೆ" ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

"ಮುಡಾ ಹಗರಣ, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ, ಗ್ಯಾರಂಟಿ ಯೋಜನೆಗಳಿಗೆ ಎಸ್‌ಸಿ–ಎಸ್‌ಟಿಗೆ ಮೀಸಲಿಟ್ಟ ಅನುದಾನ ದುರ್ಬಳಕೆ ಯಾವುದೇ ವಿಚಾರವನ್ನು ತಾರ್ಕಿಕ ತೀರ್ಮಾನಕ್ಕೆ ಕೊಂಡೊಯ್ಯಲು ನಮ್ಮ ಪಕ್ಷಕ್ಕೆ ಸಾಧ್ಯವಾಗಿಲ್ಲ. ವಿರೋಧ ಪಕ್ಷದ ನಾಯಕರೂ ಈ ವಿಷಯಗಳನ್ನು ಸಮರ್ಥವಾಗಿ ಮಂಡಿಸುವಲ್ಲಿ ವಿಫಲರಾಗಿದ್ದಾರೆ. ಇದರಿಂದಾಗಿ ಆಡಳಿತ ಪಕ್ಷದ ಜೊತೆ ವಿರೋಧ ಪಕ್ಷ ಶಾಮೀಲಾಗಿತ್ತೇನೋ ಎಂಬ ಕುತೂಹಲ ಜನರಲ್ಲಿ ಮೂಡಿದೆ! ಮೈಸೂರಿನಲ್ಲಿ ಮುಡಾ ವಿರುದ್ಧದ ಹೋರಾಟ ಕಣ್ಣೊರೆಸುವ ತಂತ್ರವಾಗಿ ಕಂಡುಬಂದಿದೆ" ಎಂದಿದ್ದಾರೆ.

"ಒಟ್ಟಾರೆ ಈ ಬಾರಿಯ ಅಧಿವೇಶನದಲ್ಲಿ ಪ್ರತಿಪಕ್ಷವಾಗಿ ಬಿಜೆಪಿ ಸಂಪೂರ್ಣ ವಿಫಲವಾಗಿದೆ. ಅಧಿವೇಶನದಲ್ಲಿ ನಾಯಕರ ವರ್ತನೆಯನ್ನು ಗಮನಿಸಿದರೆ, ಈ ನಾಯಕರ ನೇತೃತ್ವದ ಬಿಜೆಪಿ ಮುಂದಿನ ದಿನಗಳಲ್ಲಿ ದೊಡ್ಡ ಹೋರಾಟಗಳಲ್ಲಿ ಹೇಗೆ ತೊಡಗಿಸಿಕೊಳ್ಳಬಹುದು ಎಂಬುದು ಎಲ್ಲಾ ಪ್ರಾಮಾಣಿಕ ಮತ್ತು ಶ್ರಮಿಸುವ ಕಾರ್ಯಕರ್ತರಿಗೆ ದೊಡ್ಡ ಪ್ರಶ್ನೆಯಾಗಿದೆ" ಎಂದು ಹೇಳಿದ್ದಾರೆ.

"ಒಂದು ಕಾಲದಲ್ಲಿ ಅಧಿವೇಶನಗಳಲ್ಲಿ ಘರ್ಜನೆ ಮಾಡುತ್ತಿದ್ದು, ಅತ್ಯಂತ ಕಡಿಮೆ ಸ್ಥಾನಗಳಿದ್ದರೂ ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಿದ್ದ ನಮ್ಮ ಪಕ್ಷದ ಈ ಸ್ಥಿತಿಯನ್ನು ಕಂಡು ನನಗೆ ತುಂಬಾ ಆತಂಕ ಮತ್ತು ನಿರಾಶೆಯಾಗಿದೆ" ಎಂದಿದ್ದಾರೆ.

2023ರ ವಿಧಾನಸಭಾ ಚುನಾವಣೆಯಲ್ಲಿ ಬೆಂಗಳೂರಿನ ಮಹದೇವಪುರ ಕ್ಷೇತ್ರದಿಂದ ಬಿಜೆಪಿ ಅರವಿಂದ ಲಿಂಬಾವಳಿ ಅವರಿಗೆ ಟಿಕೆಟ್ ನಿರಾಕರಿಸಿತ್ತು. ಅರವಿಂದ್ ಲಿಂಬಾವಳಿ ಬದಲಾಗಿ ಪತ್ನಿ ಮಂಜುಳಾ ಅರವಿಂದ ಲಿಂಬಾವಳಿ ಅವರಿಗೆ ಪಕ್ಷ ಟಿಕೆಟ್ ನೀಡಿತ್ತು. ಮಂಜುಳಾ ಅವರು 44,501 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.

## ರಾಜ ನುಡಿ

ಇನ್ನೊಬ್ಬರ ಕೊರತೆಗಳನ್ನು ಎತ್ತಿ ತೋರಿಸುವ ಗಾಯವನ್ನೇ ಹುಡುಕುವನೊಣಗಳಾದಾಗ ಬದುಕು ಉಪ್ಪಾಗುತ್ತದೆ. ಹೂವನ್ನು ಅರಸುವ ಜೇನು

ನೊಣವಾದಾಗ ಅದೇ ಬದುಕು ಸಿಹಿಯಾಗುತ್ತದೆ. ನೊಣವಾ ಅಥವಾ ಜೇನುನೊಣವಾ ಆಯ್ಕೆ ನಮ್ಮದೇ..

–ಡಾ. ರಾಜಶೇಖರ ನಾಗೂರ



## ವಚನ ಚಿಂತನ

*ಆದಿ ಅನಾದಿ ಒಂದಾದಂದು, ಚಂದ್ರಸೂರ್ಯರೊಂದಾದಂದು, ಧರೆ ಆಕಾಶ ಒಂದಾದಂದು; ಗುಹೇಶ್ವರಲಿಂಗನು ನಿರಾಳನು.*

ಆಧುನಿಕ ಖಗೋಳ ವಿಜ್ಞಾನದ ಅನೇಕ ಸಂಶೋಧನಾತ್ಮಕ ಅಂಶ ಗಳನ್ನು 12ನೇ ಶತಮಾನದ ಅಲ್ಲಮಪ್ರಭುಗಳ ವಚನಗಳಲ್ಲಿ ನಾ ವು ಕಾಣುತ್ತೇವೆ,21ನೇ ಶತಮಾನದ ಪ್ರಸಿದ್ಧ ವಿಜ್ಞಾನಿ ಸ್ಟೀಫನ್ ಹಾಕಿಂಗ್ ರ ಸಂಶೋಧನೆಯಂತೆ , ಈ ಸೃಷ್ಟಿ ಯು ಸುಮಾರು 13 ಬಿಲಿಯನ್ ವರ್ಷಗಳ ಹಿಂದೆ ಬಯಲಿ (ಶೂನ್ಯ)ನಲ್ಲಿ ಉಂಟಾದ ಆದಿಮೂಲ ಪರಮಾಣು ,ಅದರ ಅಂತರಂಗದಲ್ಲಿ ಉಂಟಾದ ಶಾಖದ ಪರಿಣಾಮದಿಂದ ಮಹಾಸ್ಫೋಟದೊಂದಿಗೆ ಸಿಡಿಯಿತು, ದೂರು ಚಿಮ್ಮಿದ ದ್ರವ್ಯವೇ ಕಾಲಾಂತರದಲ್ಲಿ ಗ್ರಹ ನಕ್ಷತ್ರಗಳಾಗಿ ಹೊರಹೊಮ್ಮಿದವು ಸೂಕ್ತ ವಾತಾವರಣ ಲಭಿಸಿದ ಗ್ರಹಗಳಲ್ಲಿ ಜೀವಿಗಳು ಉದಯಿಸಿದವು.ಮೇಲಿನ ವಚನವು ಇದೇ ತಿರುಳನ್ನು ಹೊಂದಿದ್ದು. ಗುಹೇಶ್ವರನು(ಮೂಲ ಚೈತನ್ಯ) ನಿರಾಳ(ರೂಪರಹಿತ)

ಮಹಾಸ್ಫೋಟದ ಸಮಯದಲ್ಲಿ ಹೊರಹೊಮ್ಮಿದಶಬ್ದವೇ ಪ್ರಣವ ನಾದ ಅದು ಶಕ್ತಿಯ ಹರಿಯುವಿಕೆಯಾಗಿದ್ದು ಈ ನಾದವು ಸೃಷ್ಟಿ ಯ ಚರಾಚರ ವಸ್ತುಗಳಲ್ಲೂ ಜೀವಿಗಳಲ್ಲೂ ಆವರಿಸಿಕೊಂಡಿ ದ್ದು, ಚೈತನ್ಯ (ಜಂಗಮ) ಕ್ಕೆ ಕಾರಣವಾಗಿದೆ,ಈ ಶಕ್ತಿಯು ಅಣುವಿನಲ್ಲಿ ಪರಮಾಣುಶಕ್ತಿಯಾಗಿ ಜೀವಿಗಳಲ್ಲಿ ಚೇತನವಾಗಿದ್ದುಇದನ್ನು ವಿಜ್ಞಾನಿ ಐನ್ಸ್ಟೀನ್ ಇ=ಟಛಿ2 ಎಂಬ ಸೂತ್ರದಲ್ಲಿ ಸೆರೆಹಿಡಿದಿರುವುದ ನ್ನು 900 ವರ್ಷಗಳ ಹಿಂದೆ ಅಲ್ಲಮಪ್ರಭುಗಳು ತಮ್ಮ ವಚನಗಳ ಲ್ಲಿ ಹೇಳಿದ್ದಾರೆ."ಆದಿ ಅನಾದಿಗಳಿಲ್ಲದಂದಿನ ಕೂಗು;ನಾದ ಬಿಂದು ಗಳಿಲ್ಲದಂದಿನ ಕೂಗ ಕಂಡು ಕೂಗಿದೆ ! ಇಡಾ ಪಿಂಗಳ ಸುಷುಮ್ನ ನಾಳಮಧ್ಯದ ಕೂಗ ಕಂಡು ಕೂಗಿದೆ. ಗುಹೇಶ್ವರನೆಂಬ ತಲೆವೊಲ ನ ದಾಂಟಿ ಅಲ್ಲಮ ಕೂಗಿದ ಕೂಗು"

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಬಸವನಬಾಗೇವಾಡಿ: ಬೀದಿ ವ್ಯಾಪಾರಸ್ಥರ ಮುಂದುವರಿದ ಧರಣಿ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಪಟ್ಟಣದ ಹೃದಯ ಭಾಗದಲ್ಲಿ ನಿರ್ಮಾಣವಾಗಿರುವ ಮೆಗಾಮಾರುಕಟ್ಟೆಯ ಕೊಲ್ಹಾರ ಮುಖ್ಯ ರಸ್ತೆಯಲ್ಲಿರುವ ಆವರಣ ಗೋಡೆಗೆ ಹೊಂದಿಕೊಂಡಂತೆ ಡಬ್ಬಾ ಅಂಗಡಿಗಳನ್ನು ಇಟ್ಟುಕೊಂಡು ವ್ಯಾಪಾರ ವಹಿವಾಟು ಮಾಡುತ್ತಿದ್ದ ವ್ಯಾಪಾರಿಗಳು ನಮಗೆ ಬೇರೆಡೆ ವ್ಯಾಪಾರ ಮಾಡಲು ಅವಕಾಶ ನೀಡುವಂತೆ ಟಿಪ್ಪು ಕ್ರಾಂತಿ ಸೇನೆಯ ನೇತೃತ್ವದಲ್ಲಿ ಆಗ್ರಹಿಸಿ ನಡೆಸುತ್ತಿರುವ ಅಹೋರಾತ್ರಿ ಧರಣಿ ಶನಿವಾರವೂ ಮುಂದುವರಿಯಿತು.

ಪಟ್ಟಣದ ಮಾರುತಿ ದೇವಸ್ಥಾನದ ಹತ್ತಿರದಿಂದ ನಾಗೂರ ಕ್ರಾಸ್ವರೆಗೆ ಇದ್ದ ಆವರಣಗೋಡೆಯನ್ನು ಪುರಸಭೆ ಅಧಿಕಾರಿಗಳು ಗುರುವಾರ ತೆರವುಗೊಳಿಸಿದ್ದರಿಂದ ನಾವು ಆವರಣಗೋಡೆ ಹೊಂದಿಕೊಂಡು ಹಲವಾರು ತಿಂಗಳುಗಳಿಂದ ಅಂಗಡಿಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡುವ ಮೂಲಕ ನಮ್ಮ ಜೀವನ ನಿರ್ವಹಣೆ ಮಾಡುವ ಮೂಲಕ ಹೊಟ್ಟೆ ತುಂಬಿಸಿಕೊಳ್ಳುತ್ತಿದ್ದೇವೆ. ಈಗ ದಿಢೀರ್ ಪುರಸಭೆಯ ಅಧಿಕಾರಿಗಳು ಆವರಣಗೋಡೆ ತೆರವು ಗೊಳಿಸಿದ್ದರಿಂದ ನಮ್ಮ ಅಂಗಡಿ–ಮುಂಗಟ್ಟುಗಳನ್ನು ತೆರವುಗೊಳಿಸಲಾಗಿದೆ. ಇದರಿಂದಾಗಿ ನಮ್ಮ ವ್ಯಾಪಾರ ನಿಂತು ಹೋಗಿದೆ. ಅಧಿಕಾರಿಗಳು ಕೂಡಲೇ ನಮಗೆ ವ್ಯಾಪಾರ ಮಾಡಲು ಜನನಿ ಬಿಡ ಪ್ರದೇಶದಲ್ಲಿ ಸ್ಥಳಾವಕಾಶ ಮಾಡಿಕೊಟ್ಟರೆ ನಾವು ಜೀವನ ನಿರ್ವಹಣೆ ಮಾಡಲು ಅನುಕೂಲವಾಗುತ್ತದೆ. ನಮಗೆ ನ್ಯಾಯ ಸಿಗುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ. ನಿನ್ನೆಯಿಂದ ನಾವು ಅಹೋರಾತ್ರಿ ಧರಣಿ ಆರಂಭಿಸಿದ್ದೇವೆ. ತಹಸೀಲ್ದಾರ ಅವರಿಗೆ ಮನವಿ ಮಾಡಿಕೊಂಡಾಗ ಅವರು ಪುರಸಭೆ ಅಧಿಕಾರಿಗಳೊಂದಿಗೆ ಮಾತನಾಡುವ ಭರವಸೆ ನೀಡಿದ್ದಾರೆ. ಇದುವರೆಗೂ ನಮಗೆ ಬೇರೆಡೆ ವ್ಯಾಪಾರ ಮಾಡಲು ಸ್ಥಳ ತೋರಿಸಿಲ್ಲ. ನಮಗೆ ನ್ಯಾಯ ಸಿಗುವವರೆಗೂ ಧರಣಿ ಮುಂದುವರಿಸುತ್ತೇವೆ ಎಂದು ಧರಣಿ ನಿರತರು ಹೇಳಿದರು.

ಧರಣಿ ಸ್ಥಳಕ್ಕೆ ಶನಿವಾರ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ, ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಪುರಸಭೆ ಮುಖ್ಯಾಧಿಕಾರಿ ಎಚ್.ಎಸ್.ಚಿತ್ತರಗಿ ಅವರು ಭೇಟಿ ನೀಡಿ ಧರಣಿ ನಿರತರಿಗೆ ತಾವು ರಸ್ತೆ ಬದಿ ವ್ಯಾಪಾರ ಮಾಡುವದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತದೆ. ಬಸ್ ನಿಲ್ದಾಣದ ಹತ್ತಿರವಿರುವ ಇಂದಿರಾ ಕ್ಯಾಂಟಿನ್ ಹತ್ತಿರ ಜಾಗೆ ಇದೆ. ಅಲ್ಲಿ ತಮ್ಮ ವ್ಯಾಪಾರ ವಹಿವಾಟು ಮಾಡಿಕೊಳ್ಳಲು ಅವಕಾಶ ನೀಡಲಾಗುವದು. ತಮ್ಮ ಧರಣಿಯನ್ನು ಹಿಂಪಡೆಯುವಂತೆ ಹೇಳಿದಾಗ ಧರಣಿ ನಿರತರು ಇಂದಿರಾ ಕ್ಯಾಂಟೀನ್ ಹತ್ತಿರ ಜನರು ಬರುವದಿಲ್ಲ. ನಮಗೆ ವ್ಯಾಪಾರ ಆಗುವುದಿಲ್ಲ. ನಮಗೆ ಮೆಗಾಮಾರುಕಟ್ಟೆ ಸುತ್ತಮುತ್ತ ವ್ಯಾಪಾರ ಮಾಡಿಕೊಳ್ಳಲು ಜಾಗೆ ನೀಡಬೇಕು. ನಮಗೆ ಸೂಕ್ತ ಜಾಗೆ ನೀಡುವವರೆಗೂ ಧರಣಿ ಹಿಂಪಡೆಯುವುದಿಲ್ಲ ಎಂದು ಅಧಿಕಾರಿಗಳಿಗೆ ತಿಳಿಸಿದ ಅವರು ನಮಗೆ ನ್ಯಾಯ ಸಿಗುವವರೆಗೂ ಧರಣಿ ಮುಂದುವರಿಸುವದಾಗಿ ಹೇಳಿದರು.

ಧರಣಿಯಲ್ಲಿ ಟಿಪ್ಪು ಕ್ರಾಂತಿ ಸೇನೆಯ ಖಾಜಂಬರ ನದಾಫ, ಬೀದಿ ಬದಿಯ ವ್ಯಾಪಾರಸ್ಥರಾದ ಮಹಿಬೂಬ ಬಾಗವಾನ, ಶ್ರೀಶೈಲ ಅಂಬಾಗೋಳ, ಆಶೀಫ್ ಸೌದಾಗಾರ, ಶಂಕ್ರಯ್ಯ ಹಿರೇಮಠ, ಭಾರತಿ ಅಂಬಾಗೋಳ, ಶಾಂತಾಬಾಯಿ ಕಾಸರ, ಜಾಕೀರ ನದಾಫ, ಬಾಳು ಕಡಕದಾರ, ಡೋಂಗ್ರಿಸಾಬ ಬಾಗವಾನ, ದೇವಮ್ಮ ಮಾದರ, ಸೈದಾ ಬಾಗವಾನ, ರೇಷ್ಮಾ ಆಲಮೇಲ, ಶಿವಾನಂದ ಅಂಬಾಗೋಳ, ಅನ್ವರ ಬೈರವಾಡಗಿ, ಬಿ.ಡಿ.ಭೂತನಾಳ, ಲಕ್ಷ್ಮೀಬಾಯಿ ಜೋಗೇರ, ಡೋಂಗ್ರಿಮಾ ಬೈರವಾಡಗಿ, ಮಹಿಬೂಬಸಾಬ ಜಿರಗಾಳ, ಶ್ಯಾಮಶ್ಯಾದ ಬಿಜಾಪುರ, ಭಾಷಾ ಕಲಾದಗಿ, ಪ್ರಕಾಶ ಭೂತನಾಳ, ಯಾಸ್ಮೀನ ಗೊಳಸಂಗಿ, ರೇಖಾಬಾಯಿ ಜೋಗೇರ, ನಾಗೇಶ ಜೋಗೇರ, ಯಾಸೀನ ಗೊಳಸಂಗಿ, ಪರಶುರಾಮ ಕಡಕದಾರ, ಸಲೀಮಾ ಬಾಗವಾನ ಇತರರು ಭಾಗವಹಿಸಿದ್ದರು.

**ಬಿ.ಎಲ್.ಡಿ.ಇ ಆಸ್ಪತ್ರೆಯ ಅಪಘಾತ ಮತ್ತು ತುರ್ತು ಚಿಕಿತ್ಸೆ ವಿಭಾಗದ ಕಟ್ಟಡ ಉದ್ಘಾಟನೆ & ಡಾ. ಫ.ಗು.ಹಳಕಟ್ಟಿ, ಬಂಥನಾಳ ಸಂಗನಬಸವ ಶ್ರೀಗಳು, ಬಿ.ಎಂ.ಪಾಟೀಲ ಹಾಗೂ ಬಂಗಾರಮ್ಮ ಸಜ್ಜನ ಸ್ಮರಣೆ**

# ಸಚಿವ ಎಂ.ಬಿ.ಪಾಟೀಲರಿಂದ ಈ ಭಾಗದಲ್ಲಿ ಜಲಕ್ರಾಂತಿ :ಕೋರೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ಶತಮಾನದ ಹಿಂದೆ ಈ ಭಾಗದ ಶರಣರು ಮತ್ತು ಮಹನೀಯರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಉತ್ತರ ಕರ್ನಾಟಕದ ಜನ ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಆರ್ಥಿಕವಾಗಿ ಅಭಿವೃದ್ಧಿಯಾಗಲು ಕಾರಣರಾಗಿದ್ದಾರೆ ಎಂದು ಬೆಳಗಾವಿ ಕೆ.ಎಲ್.ಇ ಸಂಸ್ಥೆಯ ಚೇರಮನ್ ಮತ್ತು ಕಾಹೆರ ಕುಲಾಧಿಪತಿ ಪ್ರಭಾಕರ ಬಿ. ಕೋರೆ ಹೇಳಿದ್ದಾರೆ.

ಶನಿವಾರ ನಗರದ ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅಪಘಾತ ಮತ್ತು ತುರ್ತು ಚಿಕಿತ್ಸೆ ವಿಭಾಗದ ಕಟ್ಟಡ(ಟ್ರಾಮಾ ಸೆಂಟರ್ ಮತ್ತು ಎಮರ್ಜೆನ್ಸಿ ಮೆಡಿಸೀನ್) ಉದ್ಘಾಟಿಸಿದ ಅವರು, ಬಿ.ಎಲ್.ಡಿ.ಇ ಸಂಸ್ಥೆಯನ್ನು ಕಟ್ಟಿ ಬೆಳೆಸಿದ ಡಾ. ಫ. ಗು.ಹಳಕಟ್ಟಿ, ಬಂಥನಾಳ ಸಂಗನಬಸವ ಶಿವಯೋಗಿಗಳು, ಬಿ.ಎಂ.ಪಾಟೀಲ ಹಾಗೂ ಬಂಗಾರಮ್ಮ ಸಜ್ಜನ ಅವರ ಸ್ಮರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

19ನೇ ಶತಮಾನದ ಪ್ರಾರಂಭದಲ್ಲಿ ಶಿಕ್ಷಣ, ನೀರಾವರಿ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಅಭಿವೃದ್ಧಿ ಮರಿಚಿಕೆಯಾಗಿದ್ದ ಮುಂಬೈ ಕರ್ನಾಟಕದ ಬಾಗಲಕೋಟೆಯಲ್ಲಿ ಬಿ.ವಿ.ವಿ.ಎಸ್, ಬಿಜಾಪುರದಲ್ಲಿ ಬಿ.ಎಲ್.ಡಿ.ಇ ಮತ್ತು ಬೆಳಗಾವಿಯಲ್ಲಿ ಕೆ.ಎಲ್.ಇ ಶಿಕ್ಷಣ ಸಂಸ್ಥೆಗಳು ಪ್ರಾರಂಭವಾದವು. ಅಂದು ಈ ಭಾಗದ ಜನ ವೈದ್ಯರು, ನ್ಯಾಯವಾದಿಗಳಿಗಾಗಿ ಮಹಾರಾಷ್ಟ್ರದತ್ತ ಮುಖ ಮಾಡಬೇಕಾಗಿತ್ತು. ಮರಾಠಿ ಪ್ರಭಾವ ಹೆಚ್ಚಾಗಿದ್ದ ಈ ಭಾಗದಲ್ಲಿ ಆಗ ಹಾನಗಲ್ ಶಿವಯೋಗಿಗಳು, ಶಿರಸಂಗಿ ಲಿಂಗರಾಜ ದೇಸಾಯಿ, ಪಂಡಿತರಾವ ಚಿಕ್ಕೋಡಿ, ವಚನಪಿತಾಮಹ ಡಾ. ಫ. ಗು. ಹಳಕಟ್ಟಿ, ಬಂಥನಾಳ ಸಂಗನಬಸವ ಶಿವಯೋಗಿಗಳು, ಬಿ. ಎಂ. ಪಾಟೀಲರು, ಬಂಗಾರಮ್ಮ ಸಜ್ಜನ, ಸರ್. ಕಂಬಳಿ ಸಿದ್ದಪ್ಪ, ಅರಟಾಳು ರುದ್ರಗೌಡರಂಥ ಮೇಧಾವಿ ಮತ್ತು ದಾನಿಗಳ ಸಹಕಾರದಿಂದ ಈ ಭಾಗದಲ್ಲಿ ಎಲ್ಲ ಸಮುದಾಯಗಳಿಗೆ ಶಿಕ್ಷಣ ಸೌಲಭ್ಯ ನೀಡಲಾಯಿತು. ಇದರಿಂದ ಸರ್ವಜನರ ಸರ್ವಾಂಗೀಣ ಅಭಿವೃದ್ಧಿಗೆ ಕಾರಣವಾಯಿತು. ಈ ಸಂಸ್ಥೆಗಳಲ್ಲಿ ಓದಿದ ವೈದ್ಯರು ಇಂದು ಆಂಗಾಂಗ ಕಸಿ ಕ್ಷೇತ್ರದಲ್ಲಿ ಗಣನೀನಯ ಸಾಧನೆ ಮೂಲಕ ರೋಗಿಗಳಿಗೆ ಮರುಜೀವ ನೀಡುತ್ತಿದ್ದಾರೆ. ಅಂದು ಸ್ಥಾಪಿಸಿದ ಬಿ.ಎಲ್.ಡಿ.ಇ ಸಂಸ್ಥೆಯನ್ನು ಇಂದು ಎಂ. ಬಿ. ಪಾಟೀಲರು ಹೆಮ್ಮರವಾಗಿ ಬೆಳೆಸಿದ್ದಾರೆ. ಸಚಿವರಾಗಿ ಈ ಭಾಗದಲ್ಲಿ ಜಲಕ್ರಾಂತಿ ಮಾಡಿದ್ದಾರೆ. ಈ ಮೂಲಕ ಈ ಭಾಗದ ಸರ್. ಎಂ. ವಿಶ್ವೇಶ್ವರಯ್ಯ ಎನಿಸಿಕೊಂಡಿದ್ದಾರೆ. ಅಷ್ಟೇ ಅಲ್ಲ, ಬಿ.ಎಲ್.ಡಿ.ಇ ಸಂಸ್ಥೆಯಲ್ಲಿ ಟ್ರಾಮಾ ಸೆಂಟರ್ ಪ್ರಾರಂಭಿಸುವ ಮೂಲಕ ಎಲ್ಲ ಅತ್ಯಾಧುನಿಕ ವೈಜ್ಞಾನಿಕ ಸೌಲಭ್ಯಗಳನ್ನು ಒದಗಿಸಿ ಉತ್ತರ ಕರ್ನಾಟಕದಲ್ಲಿಯೇ ಸುಸಜ್ಜಿತ ಆಸ್ಪತ್ರೆಯನ್ನಾಗಿ ಮಾಡಿದ್ದಾರೆ. ಕೆ.ಎಲ್.ಇ ವೈದ್ಯರನ್ನು ಇಲ್ಲಿಗೆ ತರಬೇತಿಗೆ ಕಳುಹಿಸುತ್ತೇನೆ. ಬಿ.ಎಲ್.ಡಿ.ಇ ಸಂಸ್ಥೆ ಬೆಂಗಳೂರಿನಲ್ಲಿಯೂ ಒಂದು ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವುದನ್ನು ನೋಡುವ ಆಸೆ ನನ್ನದಾಗಿದೆ ಎಂದು ಅವರು ಹೇಳಿದರು.

ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಮಾತನಾಡಿ, ಶತಮಾನದ ಹಿಂದೆ ಮೈಸೂರು ಭಾಗದಲ್ಲಿ ಅಲ್ಲಿನ ಮಹಾರಾಜರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಅಲ್ಲಿನ ಜನರಿಗೆ ಅನುಕೂಲ ಕಲ್ಪಿಸಿದ್ದರು. ಆದರೆ, ಉತ್ತರ ಕರ್ನಾಟಕದಲ್ಲಿ ಮಾತ್ರ ಸೂಕ್ತ ಶೈಕ್ಷಣಿಕ ಸೌಲಭ್ಯಗಳಿಲ್ಲದ ಕಾರಣ ಈ ಭಾಗದ ಜನ ಆರ್ಥಿಕವಾಗಿಯೂ ಹಿಂದುಳಿಯುವಂತಾಗಿತ್ತು. ಆದರೆ, ಫ. ಗು. ಹಳಕಟ್ಟಿ, ಬಂಥನಾಳ ಶ್ರೀಗಳು, ಬಿ. ಎಂ. ಪಾಟೀಲ ಮತ್ತು ಬಂಗಾರಮ್ಮ ಸಜ್ಜನ ಅವರಿಂದಾಗಿ ವಿಜಯಪುರ ಜಿಲ್ಲೆಯಲ್ಲಿ ಬಿ.ಎಲ್.ಡಿ.ಇ ಸಂಸ್ಥೆ, ಶ್ರೀ ಸಿದ್ದೇಶ್ವರ ಸಂಸ್ಥೆ, ಶ್ರೀ ಸಿದ್ಧೇಶ್ವರ ಬ್ಯಾಂಕ್, ಬರ ನಿರ್ವಹಣಾ ಸಂಸ್ಥೆ, ಭೂತನಾಳ ಕೆರೆಗಳು ನಿರ್ಮಾಣವಾದವು. ಹಳಕಟ್ಟಿಯವರು ಸಂಶೋಧನೆಯ ಮೂಲಕ 250 ಶರಣರು ಮತ್ತು ಅವರ ಸುಮಾರು 10 ಸಾವಿರ ವಚನಗಳನ್ನು ಬೆಳಕಿಗೆ ತಂದು ವಚನಗುಮ್ಮಟ ಎನಿಸಿಕೊಂಡರು. ಬಂಥನಾಳ ಶ್ರೀಗಳು ಶೈಕ್ಷಣಿಕ್ಕೆ ಒತ್ತು ನೀಡಿದರೆ, ಬಂಗಾರಮ್ಮ ಸಜ್ಜನ ಬಿ.ಎಲ್.ಡಿ.ಇ ಸಂಸ್ಥೆಗೆ ತಮ್ಮ ಜಮೀನು ದಾನ ಮಾಡಿದರು. ಬಿ. ಎಂ. ಪಾಟೀಲ ಅವರು ಎಂಜಿನಿಯರಿಂಗ್, ಮೆಡಿಕಲ್ ಮತ್ತು ಬಿ.ಎಡ್ ಕಾಲೇಜು ಪ್ರಾರಂಭಿಸಿ ನಮ್ಮ ವಿದ್ಯಾರ್ಥಿಗಳಿಗೆ ವೃತ್ತಿಪರ ಶಿಕ್ಷಣ ಸಿಗಲು ಕಾರಣರಾದರು. ಸರ್ವಾಂಗೀಣ ಅಭಿವೃದ್ಧಿಗೆ ಕೊಡುಗೆ ನೀಡಿದ ಮಹನೀಯರನ್ನು ಸ್ಮರಿಸಿ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಸರ್ವಜನರು ಸುಖವಾಗಿರಲಿ ಎಂಬುದು ಅಂದಿನ ಮಹನೀಯರ ಆಶಯವಾಗಿತ್ತು ಎಂದು ಹೇಳಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಯಡಿಯೂರು–ಗದಗ–ಡಂಬಳ ತೋಂಟದಾರ್ಯ ಮಠದ ಶ್ರೀ ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿ, ಒಂದು ಶತಮಾನದ ಹಿಂದೆ ಶಿಕ್ಷಣ ಮರಿಚಿಕೆಯಾಗಿದ್ದ ಈ ಭಾಗದಲ್ಲಿ ಬಡತನ ಮತ್ತು ದಾರಿದ್ರ್ಯ ಹೆಚ್ಚಾಗಿತ್ತು. ಆಗ ಬಿ.ವಿ.ವಿಎಸ್., ಬಿ.ಎಲ್.ಡಿ.ಇ ಮತ್ತು ಕೆ.ಎಲ್.ಇ ಸಂಸ್ಥೆಗಳನ್ನು ಪ್ರಾರಂಭಿಸುವ ಮೂಲಕ ಅಂದಿನ ಶರಣರು ಶೈಕ್ಷಣಿಕ ಕ್ರಾಂತಿ ಮಾಡಿದರು. ನಿಂದನೆಗೆ ಹೆದರದೆ, ಟೀಕೆಗಳಿಗೆ ಕುಗ್ಗದೆ ತನು, ಮನ, ಧನದಿಂದ ಈ ಭಾಗದಲ್ಲಿ ಕನ್ನಡ ಭಾಷೆ ಗಟ್ಟಿಯಾಗಿ ಬೇರೂರಲು ಮತ್ತು ಈ ಮೂಲಕ ಸಾಮಾಜಿಕ, ಆರ್ಥಿಕವಾಗಿ ಇಲ್ಲಿನ ಜನ ಸ್ವಾವಲಂಬಿಯಾಗಲು ಅಮೂಲ್ಯ ಕೊಡುಗೆ ನೀಡಿದರು. ಇಂದಿನಿಂದ ಇಂದಿನವರೆಗೂ ಲಿಂಗಾಯಿತ ಶಿಕ್ಷಣ ಸಂಸ್ಥೆಗಳು ಮತ್ತು ಮಠಗಳು ಸಮಾಜದ ಸರ್ವಜನರ ಅಭಿವೃದ್ಧಿಗೆ ಕೊಡುಗೆ ನೀಡುತ್ತಿವೆ. ಹಳಕಟ್ಟಿ, ಬಂಥನಾಳ ಶ್ರೀಗಳು, ಬಂಗಾರಮ್ಮ ಸಜ್ಜನ, ಬಿ. ಎಂ. ಪಾಟೀಲ ಅವರು ಅಂದು ಈ ಕೆಲಸ ಮಾಡಿರದಿದ್ದರೆ ಇಂದು ಈ ಭಾಗ ಇನ್ನೂ ಅಭಿವೃದ್ಧಿಯಿಂದ ವಂಚಿತವಾಗಿರುತ್ತಿತ್ತು. ಹೀಗಾಗಿ ಸಮಾಜಕ್ಕೆ ಅಪಾರ ಕೊಡುಗೆ ನೀಡಿರುವ ಮಹನೀಯರನ್ನು ಸ್ಮರಿಸದಿದ್ದರೆ, ಸಮಾಜದ ಸ್ವಾಸ್ಥ್ಯ ಸುಧಾರಿಸುವುದು ಕಷ್ಟಸಾಧ್ಯ ಎಂದು ಹೇಳಿದರು.

ಪ್ರಭಾಕರ ಬಿ. ಕೋರೆ ಮತ್ತು ಎಂ. ಬಿ. ಪಾಟೀಲ ಅವರು ಕೆ.ಎಲ್.ಇ ಮತ್ತು ಬಿ.ಎಲ್.ಡಿ.ಇ ಸಂಸ್ಥೆಯ ಈ ಸಂಸ್ಥೆಗಳು ಏಷಿಯಾ ಖಂಡದಲ್ಲಿ ಖ್ಯಾತಿ ಗಳಿಸಲು ಕಾರಣರಾಗಿದ್ದಾರೆ. ಹಳಕಟ್ಟಿ, ಬಂಥನಾಳ ಶ್ರೀಗಳು, ಬಿ. ಎಂ. ಪಾಟೀಲ ಮತ್ತು ಬಂಗಾರಮ್ಮ ಸಜ್ಜನ ಬಿ.ಎಲ್.ಡಿ.ಇ ಸಂಸ್ಥೆಯ ನಾಲ್ಕು ಆಧಾರ ಸ್ತಂಭಗಳಾಗಿದ್ದಾರೆ ಎಂದು ಅವರು ಹೇಳಿದರು.

ಈ ಕಾರ್ಯಕ್ರಮದಲ್ಲಿ ಟ್ರಾಮಾ ಸೆಂಟರ್ ನಿರ್ಮಾಣದಲ್ಲಿ ಸೇವೆ ಸಲ್ಲಿಸಿದ ಎಂಜಿನಿಯರ್ ಗಳಾದ ಜಿ. ಎಂ. ದುದ್ದಗಿ, ಯು. ಎನ್. ಕರಡಿ, ರಾಜು ಪಡಗಾನೂರ, ಶಾಸ್ತ್ರಿ, ರವಿ ಹೊಸಕೋಟೆ, ರಂಗರಾಜು ಅವರನ್ನು ಗಣ್ಯರು ಸನ್ಮಾನಿಸಿ ಗೌರವಿಸಿದರು.

ಇದೇ ವೇಳೆ ಬಿ.ಎಲ್.ಡಿ.ಇ ಸಂಸ್ಥೆಯನ್ನು ಕಟ್ಟಿದ ನಾಲ್ಕೂ ಜನ ಮಹನೀಯರ ಕುರಿತ ಕಿರುಹೊತ್ತಿಗೆಯನ್ನು ಗಣ್ಯರು ಬಿಡುಗಡೆ ಮಾಡಿದರು.

ಈ ಕಾರ್ಯಕ್ರಮದಲ್ಲಿ ಬಿ.ಎಲ್.ಡಿ.ಇ ಸಂಸ್ಥೆ ನಿರ್ದೇಶಕ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ, ಡೀಮ್ಡ್ ವಿವಿ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಸಮಕುಲಪತಿ ಡಾ. ಅರುಣ ಚಂ. ಇನಾಮದಾರ, ರಜಿಸ್ಟ್ರಾರ್ ಡಾ. ಆರ್. ವಿ. ಕುಲಕರ್ಣಿ, ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ಟ್ರಾಮಾ ಸೆಂಟರ್ ಆಡಳಿತಾಧಿಕಾರಿ ಡಾ. ಶರಣಪ್ಪ ಕಟ್ಟಿ, ಡಾ. ರಾಜೇಶ ಹೊನ್ನುಟಗಿ, ಡಾ. ವಿಜಯಕುಮಾರ ಕಲ್ಯಾಣಪ್ಪಗೋಳ, ಶಾಸಕ ವಿಠ್ಠಲ ಧೋಂಡಿಬಾ ಕಟಕದೊಂಡ, ಮಾಜಿ ಶಾಸಕ ಸೋಮನಗೌಡ ಪಾಟೀಲ ಸಾಸನೂರ ಸೇರಿದಂತೆ ಸಂಸ್ಥೆಯ ಆಡಳಿತ ಮಂಡಳಿ ಪದಾಧಿಕಾರಿಗಳು, ಸದಸ್ಯರು, ಗಣ್ಯರು ಉಪಸ್ಥಿತರಿದ್ದರು.

ಶ್ರೀ ಬಿ. ಎಂ. ಪಾಟೀಲ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಸಚಿವ ಎಂ. ಬಿ. ಪಾಟೀಲ ಅವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ. ಮಹಾಂತೇಶ ಬಿರಾದಾರ ಸ್ವಾಗತಿಸಿದರು. ನಿವೃತ್ತ ಪ್ರಾಚಾರ್ಯ ಮೆಹರವಾಡೆ ನಿರೂಪಿಸಿದರು. ಡಾ. ಆರ್. ಎಸ್. ಮುಧೋಳ ವಂದಿಸಿದರು.

### ಪುಲಿಯನ್ ಸಾಮ್ರಾಜ್ಯ ಪಾಕ್ಷಿಕ ಪತ್ರಿಕೆ ದಶಮಾನೋತ್ಸವ ಕಾರ್ಯಕ್ರಮ

## ಪ್ರಶಸ್ತಿ, ಕವಿಗೋಷ್ಠಿ, ಲೇಖನಗಳಿಗೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ಆಲಮೇಲ: ನಮ್ಮ ಪುಲಿಯನ್ ಸಾಮ್ರಾಜ್ಯ ಪಾಕ್ಷಿಕ ಪತ್ರಿಕೆ 2013 ರಲ್ಲಿ ಪ್ರಾರಂಭಗೊಂಡು 2023–24 ಕ್ಕೆ 10 ವರ್ಷ ಪೂರೈಸುತ್ತಿದೆ. ಕಾರಣ ಆಲಮೇಲದಲ್ಲಿ ದಶಮಾನೋತ್ಸವ ಕಾರ್ಯಕ್ರಮ ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಸಂಪಾದಕ ಪ್ರಕಾಶ ಮಾಡ್ಯಾಳ ತಿಳಿಸಿದ್ದಾರೆ.

ಮುಖ್ಯ ವೇದಿಕೆಯಲ್ಲಿ 500 ಜನ ಸಾಧಕರಿಗೆ ಸನ್ಮಾನ, ಕವಿಗೋಷ್ಠಿ, ಉಪನ್ಯಾಸ, 1000 ಪುಟಗಳ ಸ್ಮರಣ ಸಂಚಿಕೆ, ಪದಗ್ರಹಣ ಮುಂತಾದ ಕಾರ್ಯಕ್ರಮ ಇದ್ದು, ಪ್ರಶಸ್ತಿ–ಸನ್ಮಾನಕ್ಕಾಗಿ, ಕವಿಗೋಷ್ಠಿ, ಲೇಖನಗಳಿಗೆ ಅರ್ಜಿ ಅಹ್ವಾನಿಸಲಾಗಿದೆ.

ಸಹಕಾರ ರತ್ನ ಪುರಸ್ಕಾರ, ಆದರ್ಶ ಶಿಕ್ಷಕ ಪುರಸ್ಕಾರ, ಆದ–ರ್ಶ ಶಿಕ್ಷಕಿ ಪುರಸ್ಕಾರ, ಆದರ್ಶ ಶಾಲಾ ಪುರಸ್ಕಾರ, ಕಾಯಕ ರತ್ನ ಪುರಸ್ಕಾರ, ಯುವ ರತ್ನ ಪುರಸ್ಕಾರ, ಉದ್ಯಮ ರತ್ನ ಪುರಸ್ಕಾರ, ದಕ್ಷ ಆರಕ್ಷಕ ಪುರಸ್ಕಾರ, ಸೇವಾ ರತ್ನ ಪುರಸ್ಕಾರ, ರಾಜನೀತಿಜ್ಞ ಪುರಸ್ಕಾರ, ಪತ್ರಿಕಾ ದಿಗ್ಗಜ ಪುರಸ್ಕಾರ, ಆದರ್ಶ ದಂಪತಿ ಪುರಸ್ಕಾರ, ಶಾಂತಿ ರತ್ನ ಪುರಸ್ಕಾರ, ಬುದ್ಧ ರತ್ನ ಪುರಸ್ಕಾರ, ಜೈಬೀಮ ರತ್ನ ಪುರಸ್ಕಾರ, ಬಸವ ಚೇತನ ಪುರಸ್ಕಾರ, ಅಭಿನಂದನಾ ಪುರಸ್ಕಾರ, ಧರ್ಮ ತೇಜ ಪುರಸ್ಕಾರ, ಧರ್ಮವೀರಚಕ್ರ ಪುರಸ್ಕಾರ, ಕಲಾ ಸಂಪದ ಪುರಸ್ಕಾರ, ಶಿಕ್ಷಣ ಪ್ರೇಮಿ ಪುರಸ್ಕಾರ, ಅಕ್ಷರ ಬ್ರಹ್ಮ ಪುರಸ್ಕಾರ, ಸಂಪಾದನ ರತ್ನ ಪುರಸ್ಕಾರ, ವೈಧ್ಯರತ್ನ ಪುರಸ್ಕಾರ, ಜನಸೇವಕ ಪುರಸ್ಕಾರ, ಬ್ಲೂಕ್ರಾಸ್ ಯುಥ್ ಕ್ಲಬ್ ಪ್ರಶಸ್ತಿ, ಕರುನಾಡ ಪ್ರತಿಭಾ ಪುರಸ್ಕಾರ, ಹಸಿರುಸೈನಿಕ ಪುರಸ್ಕಾರ, ಪುಲಿಯನ ಸಾಮ್ರಾಜ್ಯ ಪ್ರಶಸ್ತಿ, ಕ್ಯಾನರೀಜ್ ನಾರ್ಥಸೈಡ ಅವಾರ್ಡ ಪ್ರಶಸ್ತಿಗಳಿಗೆ ಅರ್ಜಿ ಸಲ್ಲಿಸುವ ವಿಳಾಸ, ಪ್ರಕಾಶ ಜಗದೀಶ ಮಾಡ್ಯಾಳ, ಸಂಪಾದಕರು, ಪುಲಿಯನ್ ಸಾಮ್ರಾಜ್ಯ ಪಾಕ್ಷಿ ಪತ್ರಿಕೆ, ಆಲಮೇಲ– 586202, ವಿಜಯಪುರ ಜಿಲ್ಲೆ. ಮೋಬೈಲ ನಂಬರ– 9972905767 / 9972905767

## ಜಲ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ :ಲಮಾಣಿ

**ಉದಯರಶ್ಮಿ ನ್ಯೂಸ್**




ವಿಜಯಪುರ: ನೀರು ಅತ್ಯಮೂಲ್ಯ ಸಂಪತ್ತು. ಅದರ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯ. ನದಿ, ಕೆರೆ, ಬಾವಿಯ ನೀರನ್ನು ಸಂರಕ್ಷಿಸುವ ಜತೆಗೆ ಮಳೆ ನೀರು ಕೊಯ್ಲು ಮೂಲಕ ಮಳೆ ನೀರನ್ನು ಸಂಗ್ರಹಿಸುವ ಪ್ರಯತ್ನ ಮಾಡಬೇಕು ಎಂದು ಬಂಜಾರಾ ಪ್ರೌಢ ಶಾಲೆಯ ಮುಖ್ಯ ಗುರುಗಳಾದ ಇ.ಡಿ.ಲಮಾಣಿಯವರು ಹೇಳಿದರು.

ಶನಿವಾರದಂದು ಬಂಜಾರಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 'ಜಲಧೂತ ಜಾಗೃತಿ ಅಭಿಯಾನ'ದ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಲ ಮರುಪೂರಣ ವ್ಯವಸ್ಥೆ, ಬಾವಿ, ಕೆರೆ, ಕಟ್ಟೆಗಳ ಹೂಳೆತ್ತುವುದು, ಬಾಂದಾರಾ, ಇಂಗು ಗುಂಡಿಗಳ ನಿರ್ಮಾಣದಂತಹ ಕ್ರಮಗಳಿಂದ ಅಮೂಲ್ಯ ಸಂಪತ್ತಾದ ನೀರನ್ನು ಸಂರಕ್ಷಿಸಬೇಕು ಮತ್ತು ಅದರ ಸದ್ಬಳಕೆ ಹೊಣೆ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಪ್ರಾಥಮಿಕ ಶಾಲೆಯ ಮುಖ್ಯ ಗುರು ಎಂ.ಬಿ.ಪೂಜಾರಿಯವರು ಮಾತನಾಡುತ್ತ, ನೀರಿನ ನಾಳೆಯ ಅಭಾವ ತಪ್ಪಿಸಲು ಅತ್ಯಮೂಲ್ಯವಾದ ನೀರನ್ನು ಅಗತ್ಯಕ್ಕೆ ತಕ್ಕಂತೆ ಮಿತವಾಗಿ ಬಳಸಿ, ಮುಂಬರುವ ಪೀಳಿಗೆಗೆ ಉಳಿಸುವ ನಿಟ್ಟಿನಲ್ಲಿ ನಾವೆಲ್ಲರೂ ಕಾರ್ಯತತ್ಪರರಾಗಬೇಕಿದೆ. ಮಾನವ ವೈಜ್ಞಾನಿಕವಾಗಿ ಬೆಳೆದರೂ ಸಹಿತ ನೀರನ್ನು ಸೃಷ್ಟಿಸುವ ತಂತ್ರಜ್ಞಾನದ ಅವಿಷ್ಕಾರ ಮಾಡಿಲ್ಲ. ನೀರಿನ ಮಿತ ಬಳಕೆ ಬಗ್ಗೆ ಜನರಿಗೆ ಜಾಗೃತಿ ಮೂಡಿಸುವ ಕೆಲಸಗಳು ನಿರಂತರವಾಗಿರಬೇಕು ಎಂದರು.

ಈ ವೇಳೆಯಲ್ಲಿ ಶಿಕ್ಷಕರುಗಳಾದ ಎಸ್.ವಿ.ದೇಶಪಾಂಡೆ, ಎ.ಎಂ.ನಾಗೊಂಡ, ಆರ್.ವಿ.ಭುಜಂಗನವರ, ಆರ್.ಎನ್.ಬಕಾಟೆ, ಎಸ್.ಬಿ.ಒಡೆಯರ, ಜೆ.ಕೆ.ರಾಠೋಡ, ಎಸ್.ಡಿ.ಚವ್ಹಾಣ್, ಎಸ್.ಎಲ್.ದೊಡಮನಿ, ಎಸ್.ಕೆ.ಶಿಂಧೆ, ಬಿ.ಎಸ್.ದ್ಯಾಬೇರಿ, ಎಸ್.ಎಂ.ಮಾಳಿ, ಪಿ.ಎಂ.ಕೌಲಗಿ, ರೇಖಾ ರಜಪೂತ, ಎಸ್.ಪಿ.ಧಡೇಕರ, ದೈಹಿಕ ಪ್ರಶಿಕ್ಷಣಾರ್ಥಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಿಬ್ಬಂದಿ ವರ್ಗ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕಾರ್ಗಿಲ್ ವಿಜಯೋತ್ಸವ ಭಾರತೀಯರ ಹೆಮ್ಮೆಯ ಪ್ರತೀಕ :ಶ್ರೀಶೈಲಗೌಡ

**ಉದಯರಶ್ಮಿ ನ್ಯೂಸ್**



ಸಿಂದಗಿ: ಭಾರತ ಹಲವಾರು ಯುದ್ಧಗಳನ್ನು ಗೆದ್ದಿದೆ. ಆದರೆ ಕಾರ್ಗಿಲ್ ಯುದ್ಧ ಐದಾರು ಸಾವಿರ ಅಡಿ ಎತ್ತರದ ಮೊನಚಾದ ಬೆಟ್ಟ ಗುಡ್ಡಗಳ ಕಠಿಣ ಶೀತ ಪ್ರದೇಶದಲ್ಲಿ ನಡೆದಿದೆ. ಆದ್ದರಿಂದ ಕಾರ್ಗಿಲ್ ವಿಜಯೋತ್ಸವ ಭಾರತೀಯರ ಹೆಮ್ಮೆಯ ಪ್ರತೀಕವಾಗಿದೆ ಎಂದು ಬಿಜೆಪಿ ಮಂಡಲ ಕೋಶಾಧ್ಯಕ್ಷ ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ ಹೇಳಿದರು.

ಶುಕ್ರವಾರ ಸಾಯಂಕಾಲ ಬಿಜೆಪಿ ಮಂಡಲದ ವತಿಯಿಂದ ಹಮ್ಮಿಕೊಂಡ ಕಾರ್ಗಿಲ್ □□□ಯಾಲಿಗೆ ಸಂಗಮೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಚಾಲನೆ ನೀಡಿದರು. ಅಲ್ಲಿಂದ ಸ್ವಾಮಿ ವಿವೇಕಾನಂದ ವೃತ್ತದಲ್ಲಿ ಪೂರ್ಣಗೊಂಡಿತು. ಕಾರ್ಗಿಲ್ ಯುದ್ಧದಲ್ಲಿ ಪಾಲ್ಗೊಂಡ ಯೋಧರ ತ್ಯಾಗ, ಶೌರ್ಯ ಸ್ಮ–ರಿಸಲಾಯಿತು. ಹುತಾತ್ಮ ಯೋಧರಿಗೆ ಸ್ವಾಮಿ ವಿವೇಕಾನಂದ ವೃತ್ತದಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಬಿಜೆಪಿ ಮಂಡಲ ಕೋಶಾಧ್ಯಕ್ಷ ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ ಕಾರ್ಗಿಲ್ ವಿಜಯೋತ್ಸವ ಸಂಭ್ರಮಾಚರಣೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಾಕಿಸ್ತಾನ ಸೈನಿಕರ ಹುಟ್ಟಡಗಿಸಿ ಭಾರತೀಯ ಸೈನ್ಯ ವಿಜಯ ಪತಾಕೆ ಹಾರಿಸಿದ ದಿನ. ಆ ರೋಚಕ ಕ್ಷಣದ ನೆನಪಿಗಾಗಿ ಕಾರ್ಗಿಲ್ ವಿಜಯ ದಿವಸ ಆಚ–ರಿಸಲಾಗುವುದು ಎಂದರು.

ಈ ವೇಳೆ ಮಂಡಲ ತಾಲೂಕಾಧ್ಯಕ್ಷ ಸಂತೋಷ ಪಾಟೀಲ ಡಂಬಳ ಮಾತನಾಡಿ, ಯುದ್ಧ ಗೆಲ್ಲುವುದಕ್ಕೆ ಮದ್ದು ಗುಂಡುಗಳಿಗಿಂತಲೂ ಸೈನಿಕರ ಶೌರ್ಯ, ಆತ್ಮವಿಶ್ವಾಸ ಮುಖ್ಯ. ಕಾರ್ಗಿಲ್ ಯುದ್ಧದಲ್ಲಿ ನಮ್ಮ ಸೈನಿಕರು ತೋರಿದ ಶೌರ್ಯ, ಸಾಹಸಗಳನ್ನು ದೇಶ ಎಂದಿಗೂ ಅವರನ್ನು ಸ್ಮರಿಸುತ್ತದೆ. ಕಾರ್ಗಿಲ್ ಯುದ್ಧ ನಡೆದು ಜು.26ಕ್ಕೆ 25 ವರ್ಷವಾಗುತ್ತದೆ ಎಂದು ತಿಳಿಸಿದರು.

ಈ ವೇಳೆ ಮಾಜಿ ಲಿಂಬೆ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಅಶೋಕ ಅಲ್ಲಾಪೂರ, ಎಸ್.ಟಿ ಮೋರ್ಚಾ ತಾಲೂಕಾಧ್ಯಕ್ಷ ಪ್ರಶಾಂತ ಕದ್ದರಕಿ, ಯುವ ಮೋರ್ಚಾ ತಾಲೂಕಾಧ್ಯಕ್ಷ ಅಶೋಕ ನಾರಾಯಣಪುರ, ಸಿದ್ದರಾಮ ಅನಗೊಂಡ, ಎಸ್.ಆರ್. ಪಾಟೀಲ, ಮಾಜಿ ಸೈನಿಕ ಶ್ರೀಶೈಲ ಯಳಮೇಲಿ, ಬಿ.ಜಿ. ಕೊಟ–ರಗಸ್ತಿ, ಸಿ.ಎಸ್.ಅಮಲಿಹಾಳ, ಮಲ್ಲು ಪೂಜಾರ, ಪ್ರಶಾಂತ, ಬಿರಾದಾರ, ಶ್ರೀಧರ ಮಲ್ಲೇದ, ಸೇರಿದಂತೆ ಬಿಜೆಪಿ ಮಂಡಲದ ಪದಾಧಿಕಾ–ರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಮಾಜದ ಸ್ವಾಸ್ಥ್ಯವೇ ಬಂಥನಾಳ ಶ್ರೀಗಳ ಧ್ಯೇಯವಾಗಿತ್ತು :ಬಂಡೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ದೇಹದ ಆರೋಗ್ಯಕ್ಕಿಂತ ಸಮಾಜದ ಆರೋಗ್ಯವೇ ಮುಖ್ಯ ಎಂದರಿತ ಬಂಥನಾಳ ಶ್ರೀಗಳು ಶೈಕ್ಷಣಿಕ ಕ್ರಾಂತಿ ಮಾಡಿ, ಮಠಗಳ ಮೂಲಕ ರಾಷ್ಟ್ರಾಭಿಮಾನ ಹೆಚ್ಚಿಸಿದ ಧೀರ ಸನ್ಯಾಸಿಯಾಗಿದ್ದರು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಅವರು ನಗರದ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಯುವ ಘಟಕದ ವತಿಯಿಂದ ಪರಿಷತ್ತಿನ ಕಚೇ–ರಿಯಲ್ಲಿ ಹಮ್ಮಿಕೊಂಡ ಬಂಥ–ನಾಳ ಸಂಗನಬಸವ ಶಿವಯೋಗಿಗಳ ಜಯಂತಿ ಆಚರಣೆಯನ್ನು ಉದ್ದೇಶಿಸಿ ಮಾತನಾಡಿದರು.

ವಿದ್ಯಾರ್ಥಿಗಳೇ ದೇವರು, ವಿದ್ಯಾಲಯವೇ ದೇವಾಲಯ ಎಂಬ ಮಂತ್ರ ಪಠಣದೊಂದಿಗೆ ಭಕ್ತರು ಕೊಟ್ಟ ಕಾಣಿಕೆಯಲ್ಲೇ ಬಡ ಮಕ್ಕಳ ಅಕ್ಷರ ದಾಹ ನೀಗಿಸಿದ ಸಂತರಿವರು. ನಾಡಿನೆಲ್ಲೆಡೆ ವಿದ್ಯಾಕೇಂದ್ರಗಳನ್ನು ಸ್ಥಾಪಿಸಿ, ಶೈಕ್ಷಣಿಕ ಕ್ರಾಂತಿ ಮಾಡಿದ ಶ್ರೀಗಳು, ಬಡ ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿದ್ದರು ಎಂದು ಹೇಳಿದರು.

ಶಿಕ್ಷಕ ಈರಣ್ಣ ಬಿರಾದಾರ ಮಾತನಾಡಿ, ಪ್ರವಚನದ ಮೂಲಕ ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕವಾಗಿ ಹಲವು ಕಾರ್ಯಕ್ರಮಗಳ ಮೂಲಕ ಶೈಕ್ಷಣಿಕವಾಗಿ ಬರಡಾಗಿದ್ದ ವಿಜಯಪುರ ಜಿಲ್ಲೆಯನ್ನು ಶಿಕ್ಷಣದ ತವರೂರನ್ನಾಗಿಸಿದ ಕೀರ್ತಿ ಶ್ರೀಗಳಿಗೆ ಸಲ್ಲುತ್ತದೆ ಎಂದು ಹೇಳಿದರು.

ಯುವ ಘಟಕದ ಅಧ್ಯಕ್ಷ ಅಮರೇಶ ಸಾಲಕ್ಕಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಅಕ್ಷರ ದಾಸೋಹಿ ಬಂಥನಾಳದ ಶ್ರೀಗಳು ಎರಡನೇ ಬಸವಣ್ಣನಂತಿದ್ದರು. ಅವರು ತಮ್ಮ ಜೀವನದುದ್ದಕ್ಕೂ ಸರಳ ಜೀವನಕ್ಕೆ ಮಹತ್ವ ನೀಡುತ್ತಾ, ಎಲ್ಲ ಗ್ರಾಮಗಳಲ್ಲಿ ಶಿವಾನುಭವ ಮತ್ತು ಪ್ರವಚನ ಮಾಡಿ ಜನರಿಗೆ ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರೀತಿ ಬೆಳೆಯುವಂತೆ ಮಾಡಿದರು ಎಂದರು.

ಭಾರತ ಯುವ ವೇದಿಕೆ ಚಾ–ರಿಟೇಬಲ್ ಫೌಂಡೇಶನ್ ಅಧ್ಯಕ್ಷ ಸುನೀಲ ಜೈನಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಅಭಿಷೇಕ ಬೀಳೂರ, ಸಂದೀಪ ತೋಳನೂರ, ಭೀರಲಿಂಗ ಕಕ್ಕೇರಿ, ಕಿರಣ ಗುಡ್ಡಾಪುರ, ನವೀನ ಕರ್ಜಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಲಿಂಬೆ ಬೆಳೆಗಾರರಿಗೆ ಕೃಷಿ ಮೇಳ ಪ್ರವಾಸಕ್ಕೆ ಚಾಲನೆ

**ಉದಯರಶ್ಮಿ ನ್ಯೂಸ್**



ಇಂಡಿ: ಕೃಷಿ ಮೇಳ, ಜಾತ್ರೆಗಳು ರೈತರಿಗೆ ಅತ್ಯಂತ ಉಪಯೋಗಕಾರಿ, ಅಂತಹ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ರೈತರು ಸದುಪಯೋಗ ಮಾಡಿಕೊಳ್ಳಬೇಕು ಎಂದು ಕಂದಾಯ ಉಪವಿಭಾಗ ಅಧಿಕಾರಿ ಅಬೀದ್ ಗದ್ಯಾಳ ಹೇಳಿದರು.

ಶನಿವಾರ ತಾಲೂಕು ಆಡಳಿತ ಸೌಧದ ಆವರಣದಲ್ಲಿ ತೋಟಗಾರಿಕೆ ಹಾಗೂ ಎಸ್ ಡಬ್ಲ್ಯೂ ಎ ಆರ್ ಡಿ ಎಸ್ ಸಂಸ್ಥೆ ಸಹಯೋಗದೊಂದಿಗೆ "ಪರಂಪರಾಗತ ಕೃಷಿ ವಿಕಾಸ ಯೋಜನೆ ಅಡಿಯಲ್ಲಿ ಲಿಂಬೆ ಬೆಳೆಗಾರರಿಗೆ ಕೃಷಿ ಮೇಳ ಪ್ರವಾಸ ವಾಹನಗಳಿಗೆ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು.

ಕೃಷಿಕರು ಸುಸ್ಥಿರ ಮತ್ತು ಸಾವಯವ ಬೇಸಾಯದ ಬಗ್ಗೆ ಮಾಹಿತಿ ಪಡೆಯಬೇಕು. ಕೃಷಿ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ, ಕೃಷಿ ವೈಜ್ಞಾನಿಕ ಪದ್ದತಿಗಳ ಬಗ್ಗೆ ಅರ್ಥಮಾಡಿಕೊಳ್ಳಲು ಅತ್ಯಂತ ಸೂಕ್ತ ವೇದಿಕೆ ಕೃಷಿಮೇಳ ಹಾಗೂ ಕೃಷಿ ಜಾತ್ರೆ ಎಂದು ಹೇಳಿದರು. ಕೃಷಿಯಲ್ಲಿ ವೈಜ್ಞಾನಿಕ ಪದ್ದತಿ ಅಳವಡಿಕೊಂಡಾಗ ಮಾತ್ರ ರೈತರು ಒಳ್ಳೆಯ ಫಸಲು ಪಡೆಯಲು ಸಾಧ್ಯ, ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು.

ಇದೆ ಸಂದರ್ಭದಲ್ಲಿ ತೋಟಗಾರಿಕೆ ಹಿರಿಯ ಸಹಾಯಕ ನಿರ್ದೇಶಕ ಎಚ್ ಎಸ್ ಪಾಟೀಲ ಮಾತನಾಡಿದ ಅವರು, ಕೃಷಿ ಮೇಳದಲ್ಲಿ ಪಾಲ್ಗೊಂಡರೆ, ಕೃಷಿಯಲ್ಲಿ ಹೊಸ ಆವಿಷ್ಕಾರ ಮಾಡಲು ಸೂಕ್ತ ವೇದಿಕೆಯಾಗುತ್ತೆದೆ. ಹೈನುಗಾ–ರಿಕೆ, ರೇಷ್ಮೆ ಕೃಷಿ, ಕೃಷಿ ಬೆಳೆಯ ಮೌಲ್ಯವರ್ಧನೆ, ಸಾವಯವ ಕೃಷಿ, ಸುಸ್ಥಿರ ಕೃಷಿ ಹಾಗೂ ಔಷಧಿ ಮತ್ತು ಸುಗಂಧ ದ್ರವ್ಯ ಸಸ್ಯಗಳ ಬಗ್ಗೆ ಅದಲ್ಲದೇ ಅನೇಕ ರೀತಿಯ ಮಾಹಿತಿ ಮತ್ತು ಅರಿವು ದೊರೆಯುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಡವಲಗಾ ಮತ್ತು ರೂಗಿ ಗ್ರಾಮದ ಸುಮಾರು 1 ನೂರಕ್ಕೂ ಹೆಚ್ಚಿನ ರೈತರು ಉಪಸ್ಥಿತರಿದ್ದರು.

### ಬಂಜಾರಾ ಪ್ರೌಢ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪಾಲಕರ ಸಭೆ

## ವಿದ್ಯಾರ್ಥಿಗಳಿಗೆ ಸಂಸ್ಕಾರ, ಸಂಸ್ಕೃತಿ ಬಹು ಮುಖ್ಯ :ಚವ್ಹಾಣ್

**ಉದಯರಶ್ಮಿ ನ್ಯೂಸ್**



ವಿಜಯಪುರ: ಶಿಕ್ಷಣ ಮತ್ತು ಭೌತಿಕ ಸಂಪತ್ತುಗಳನ್ನು ಪಡೆಯುವುದರ ಜತೆಯಲ್ಲಿ ಸಂಸ್ಕಾರ, ಸಂಸ್ಕೃತಿಗಳ ಮೌಲ್ಯಗಳನ್ನು ಅರಿತು ಜೀವನದಲ್ಲಿ ರೂಢಿಸಲು ಪ್ರಯತ್ನಿಸಿದಲ್ಲಿ ಜೀವನ ಪರಮ ಪಾವನವಾಗುತ್ತದೆ ಎಂದು ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಿ.ಎಲ್.ಚವ್ಹಾಣ್‌ರವರು ಹೇಳಿದರು.

ಶನಿವಾರದಂದು ಬಂಜಾರಾ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ 'ಪಾಲಕರ ಸಭೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು. ಪೋಷಕರು ತಮ್ಮ ಮಕ್ಕಳ ಅಂಕ, ರ್‍ಯಾಂಕ್, ಸ್ಥಾನಮಾನ, ಬಿರುದು ಸನ್ಮಾನಗಳ ಕಡೆಗೆ ತಮ್ಮ ಶ್ರದ್ಧೆಯನ್ನು ಕೇಂದ್ರೀಕರಿಸಿ ಒತ್ತಡದ ಬದುಕಿಗೆ ಅವರನ್ನು ತಳ್ಳಿ ಬಿಡುತ್ತಾರೆ. ಶಿಕ್ಷಣ ಸ್ಥಾನಮಾನಗಳ ಜತೆಯಲ್ಲೇ ಮೌಲ್ಯಯುತ ಸಂಸ್ಕಾರಗಳನ್ನು ರೂಢಿಸಲು ಕಲಿಸಿದಲ್ಲಿ ಮಕ್ಕಳಲ್ಲಿ ವ್ಯಕ್ತಿತ್ವದ ಹೊಳಪು ಕಾಣಬಹುದು ಎಂದು ಹೇಳಿದರು.

ಶಾಲೆಯ ಮುಖ್ಯ ಗುರು ಇ.ಡಿ.ಲಮಾಣಿಯವರು ಮಾತನಾಡುತ್ತ, ಮಕ್ಕಳ ಸರ್ವತೋಮುಖ ವಿಕಾಸದಲ್ಲಿ ಶಾಲೆ ಮತ್ತು ಶಿಕ್ಷಕರಷ್ಟೇ ಪಾತ್ರ ಕುಟುಂಬ ಹಾಗೂ ಪಾಲಕರದ್ದು ಎಂಬುದು ಮರೆಯಬಾರದು. ಮಕ್ಕಳ ಶೈಕ್ಷಣಿಕತೆಗೆ ಸಂಬಂಧಿಸಿದ ಅವರ ಸಂದೇಹಗಳನ್ನು ಪರಿಹ–ರಿಸಿಕೊಳ್ಳಬೇಕು. ತಿಂಗಳಿಗೊಮ್ಮೆ ಪೋಷಕರ ಸಭೆಯನ್ನು ನಡೆಸಲಾಗುತ್ತದೆ. ಶೈಕ್ಷಣಿಕ ವಿಷಯಗಳು ಮತ್ತು ತಮ್ಮ ಮಗುವಿನ ತರಗತಿಯಲ್ಲಿನ ವರ್ತನೆಯನ್ನು ತಿಳಿಯಲು ಪೋಷಕರಿಗೆ ಇದೊಂದು ಸದಾವಕಾಶ ಎಂದು ಹೇಳಿದರು.

ಶಿಕ್ಷಕ ಎಸ್.ವಿ.ದೇಶಪಾಂಡೆಯವರು ಮಾತನಾಡುತ್ತ, ಮೊಬೈಲ್‌ನಿಂದ ಮಕ್ಕಳಲ್ಲಿರುವ ಮುಗ್ಧ ಭಾವನೆಗಳು ಕೂಡ ಕಡಿಮೆಯಾಗ್ತಿವೆ. ಮೊಬೈಲ್‌ಗೆ ಅಡಿಕ್ಟ್ ಆಗಿರೋದ್ರಿಂದ ವಿದ್ಯಾಭ್ಯಾಸದಲ್ಲಿ ಹಿಂದುಳಿಯುತ್ತಿದ್ದಾರೆ. ಇದಲ್ಲದೇ ವಿದ್ಯಾರ್ಥಿಗಳು ಸಾಮಾಜಿಕ ಮಾಧ್ಯಮಗಳಿಂದ ದೂರವಿದ್ದಷ್ಟು ಒಳ್ಳೆಯದು. ಮಕ್ಕಳು ವಿದ್ಯಾಭ್ಯಾಸದತ್ತ ಹೆಚ್ಚಿನ ಒಲವು ತೋರಬೇಕು ಹೇಳಿದರು.

ಗುರುಮಾತೆ ಜೆ.ಕೆ. ರಾಠೋಡರವರು ಮಾತನಾಡುತ್ತ, ಶಾಲೆಯ ಶಿಕ್ಷಕರು ಬೆಳಗಿನ ಜಾವ ಎದ್ದು ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಮೊಬೈಲ್ ಫೋನ್ ಮೂಲಕ ಕರೆ ಮಾಡಿ ಬೆಳಗಿನ ಓದಿಗೆ ಅಣಿಗೊಳಿಸುವ ಕೆಲಸ ನಿರ್ವಹಿಸುತ್ತಾರೆ. ಮನೆಯ ತಂದೆ–ತಾಯಿ ತಮ್ಮ ಮಗ, ಮಗಳು ಓದುತ್ತಿದ್ದಾರೆಂದು ನಿತ್ಯವೂ ಖಾತರಿ ಮಾಡಬೇಕು ಎಂದು ಹೇಳಿದರು.

ಪಾಲಕ ಪ್ರತಿನಿಧಿ ಐಶ್ವರ್ಯ ಬೆಲ್ಲದರವರು ಮಾತನಾಡುತ್ತ, ಕತ್ತಲಿನಿಂದ ಬೆಳಕಿನೆಡೆಗೆ, ಅಜ್ಞಾನದಿಂದ ಜ್ಞಾನದೆಡೆಗೆ ದಾರಿ ತೋರಿಸುವವನೇ ನೈಜ ಗುರು. ಶಿಕ್ಷಕರು ದೇಶ ಕಟ್ಟುವ, ಮಾನವೀಯ ಮೌಲ್ಯಗಳಿಗೆ ಮನ್ನಣೆ ನೀಡುವ ಶಿಷ್ಯರನ್ನು ರಾಷ್ಟ್ರಕ್ಕೆ ಅರ್ಪಿಸುವ ಕೆಲಸ ಸದಾ ಮಾಡುತ್ತಿದ್ದಾರೆ. ಇದರಿಂದ ಶಿಕ್ಷಕರು ತಮ್ಮ ಶಿಷ್ಯರ ಮನಃ ಪಟಲದಲ್ಲಿ ಸದಾ ನಿಲ್ಲುತ್ತಾರೆ. ಜಗತ್ತಿನ ಶ್ರೇಷ್ಠ ವ್ಯಕ್ತಿಗಳ ನಿರ್ಮಾಣ ಉತ್ತಮ ಶಿಕ್ಷಕರಿಂದಲೇ ಸಾಧ್ಯವಾಯಿತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತ–ರಿದ್ದರು. ಕಾರ್ಯಕ್ರಮದ ಸ್ವಾಗತ ಎ.ಎಂ.ನಾಗೊಂಡ, ವಂದನಾರ್ಪಣೆಯನ್ನು ಪಿ.ಎಂ. ಕೌಲಗಿ ಹಾಗೂ ನಿರೂಪಣೆಯನ್ನು ಎಸ್.ಕೆ.ಶಿಂಧೆಯವರು ನೆರವೇ–ರಿಸಿದರು.

## ಶೈಕ್ಷಣಿಕ ಕ್ರಾಂತಿಗೈದ ಬಂಥನಾಳ ಶ್ರೀಗಳು :ಸಿದ್ದು ಹತ್ತಳ್ಳಿ

**ಉದಯರಶ್ಮಿ ನ್ಯೂಸ್**



ಇಂಡಿ: ಜಿಲ್ಲೆಯಲ್ಲಿ ಶೈಕ್ಷಣಿಕ ಕ್ರಾಂತಿ ಮಾಡಿದ ಬಂಥನಾಳದ ಸಂಗನಬಸವ ಶ್ರೀಗಳು, ಶಿಕ್ಷಣದ ಜತೆ ಸಂಸ್ಕಾರ ನೀಡುವ ಮೂಲಕ ಜನರನ್ನು ಸುಜ್ಞಾನಿಗಳಾಗಿ ಮಾಡಿದ ಕೀರ್ತಿ ಬಂಥನಾಳ ಶ್ರೀಗಳಿಗೆ ಸಲ್ಲುತ್ತದೆ ಎಂದು ಶ್ರೀ ಸಂಗನಬಸವ ಸೌಹಾದ ಪತ್ತಿನ ಸಹಕಾರಿ ಸಂಸ್ಥೆಯ ನಿರ್ದೇಶಕ ಸಿದ್ದು ಹತ್ತಳ್ಳಿ ಹೇಳಿದರು.

ಅವರು ಶನಿವಾರ ತಾಲೂಕಿನ ತಾಂಬಾ ಗ್ರಾಮದ ಸಂಗನಬಸವ ಸೌಹಾರ್ದ ಪತ್ತಿನ ಸಹಕಾರಿ ಸಂಘದ ವತಿಯಿಂದ ಸಂಗನಬಸವೇಶ್ವರ ಶ್ರೀಗಳ 124ನೇ ಜಯಂತ್ಯೊತ್ಸವ ನಿಮಿತ್ಯ ಮಾತನಾಡಿ, ಜಂಗಮರ ಉದರದಲ್ಲಿ ಜನಿಸಿ ಸರಸ್ವತಿ ರೂಪ ತಾಳಿದ ಸಂಗನಬಸವ ಶಿವಯೋಗಿಗಳು ಪುರಾಣ ಪ್ರವಚನ ಕೇಳಿ ಭಕ್ತರು ನೀಡಿದ ದೇಣಗೆಯಲ್ಲಿ ವಿದ್ಯಾರ್ಥಿಗಳೆ ದೇವರು, ವಿದ್ಯಾಲಯಗಳೇ ದೇವಾಲಯ ಎಂದು ಶಾಲೆ ಕಾಲೇಜ್ ಕಟ್ಟುವ ಮೂಲಕ ಈ ನಾಡಿನಲ್ಲಿ ಶೈಕ್ಷಣಿಕ ಕ್ರಾಂತಿಗೈದ ಬಂಥನಾಳದ ಸಂಗನಬಸವ ಶಿವಯೋಗಿಗಳು ಎಂದು ಶ್ರೀಗಳನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಅಡಿವಪ್ಪ ರೊಟ್ಟಿ, ಶಾಂತಪ್ಪ ಹಂಚನಾಳ, ಗೋಪಾಲ ಅವರಾದಿ, ಶಿವಪ್ಪ ಹಿಪ್ಪರಗಿ, ನಾಗರಾಜ ಚಾಳಿಕಾರ, ಶಾಖಾ ವ್ಯವಸ್ಥಾಪಕ ನಾಗೇಶ ನಿಂಬಾಳ, ಮಲ್ಲಯ್ಯ ವಿರಕ್ತಮಠ, ಶಾಂತಮಾಲ್ಲ ಖಟ್ಟೆ, ರಾಕೇಶ ಬಾಗಲಕೋಟ, ಶಿವುಕುಮಾರ ಹತ್ತಿ ಪಾಲ್ಗೊಂಡಿದರು.

## ಮುದ್ದೇಬಿಹಾಳ ದಿಂದ ಹಳ್ಳೂರ ಗ್ರಾಮಕ್ಕೆ ನೂತನ ಬಸ್ ಸಂಪರ್ಕ

**ಉದಯರಶ್ಮಿ ನ್ಯೂಸ್**




ಢವಳಗಿ: ಗ್ರಾಮದ ಸರಕಾರಿ ಶಾಲೆ, ಬಸವ ಬಾಲ ಭಾರತಿ ಶಾಲೆ,ಪ್ರೌಢಶಾಲೆ ಸೇರಿದಂತೆ ಎಲ್ಲಾ ಸಮೀಪದ ಹಳ್ಳೂರ ಗ್ರಾಮದಿಂದ ಸುಮಾರು 50 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಾಲೆಗೆ ಬರುತ್ತಿದ್ದವು. ಆದರೆ ಪ್ರತಿ ಶನಿವಾರದಂದು ಶಾಲೆ ಬಿಡುವ ಸಮಯಕ್ಕೆ ಅನುಗುಣವಾಗಿ ಹಳ್ಳೂರ ಗ್ರಾಮದಿಂದ ಬಂದಂತಹ ವಿದ್ಯಾರ್ಥಿಗಳಿಗೆ ಮರಳಿ ಹೋಗಲು ಬಸ್ ಸೌಲಭ್ಯವಿಲ್ಲದೆ ಸಾಯಂಕಾಲದ ವರೆಗೆ ಕಾಯುವ ಸ್ಥಿತಿ ಉಂಟಾಗಿತ್ತು. ಅದನ್ನು ಅರಿತ ಬಸವ ಬಾಲ ಭಾರತಿ ಶಾಲೆಯ ಮುಖ್ಯ ಗುರು ರಮೇಶ ಮೂಲಿಮನಿ ಅವರು ಎಲ್ಲ ವಿದ್ಯಾರ್ಥಿಗಳು ಮತ್ತು ಶಿಕ್ಷಕರ ಜೊತೆಗೂಡಿ ಮುದ್ದೇಬಿಹಾಳ ಘಟಕದ ವ್ಯವಸ್ಥಾಪಕರಿಗೆ ಕಳೆದ ಶನಿವಾರದಂದು ಮನವಿ ಮಾಡಿದ್ದರು.

ಅದಕ್ಕೆ ಸ್ಪಂದಿಸಿದ ಮುದ್ದೇಬಿಹಾಳ ಘಟಕದ ವ್ಯವಸ್ಥಾಪಕ ಮದಬಾವಿ ಅವರು ಮಕ್ಕಳ ಹಾಗೂ ಶಿಕ್ಷಕರ ಸಮಸ್ಯೆಯನ್ನು ಆಲಿಸಿ ಪ್ರತಿ ಶನಿವಾರದಂದು ಮಧ್ಯಾಹ್ನ 12 ಗಂಟೆಗೆ ಮುದ್ದೇಬಿಹಾಳದಿಂದ ಢವಳಗಿ ಮಾರ್ಗವಾಗಿ ಹಳ್ಳೂರ ಗ್ರಾಮಕ್ಕೆ ಬಸ್ ಬಿಟ್ಟು ವಿದ್ಯಾರ್ಥಿಗಳ ಹಿತ ಕಾಪಾಡುವೆ ಎಂದು ಜುಲೈ 27 ಶನಿವಾರದಿಂದ ಬಸ್ ಸಂಪರ್ಕ ಕಲ್ಪಿಸಿದ ವ್ಯವಸ್ಥಾಪಕ–ರಿಗೆ ಧನ್ಯವಾದಗಳನ್ನು ತಿಳಿಸಿ ಬಸ್ ಚಾಲಕ ಮತ್ತು ನಿರ್ವಾಹಕರಿಗೆ ಬಸವ ಬಾಲ ಭಾರತಿ ಶಾಲೆಯ ಮುಖ್ಯ ಗುರು ರಮೇಶ ಮೂಲಿಮನಿ ಅವರು ಹಳ್ಳೂರ ಗ್ರಾಮದಲ್ಲಿ ಸನ್ಮಾನಿಸಿ ಗೌರವಿಸಿದರು.

ಇದೇ ವೇಳೆಯಲ್ಲಿ ಢವಳಗಿ ಗ್ರಾಮಕ್ಕೆ ಬರುವ ಎಲ್ಲ ಶಾಲೆಯ ವಿದ್ಯಾರ್ಥಿಗಳು ಇದ್ದರು.

# ಸ್ನಾತಕೋತ್ತರ ಪದವಿಯಲ್ಲಿ ಚಿನ್ನದ ಪದಕ ಪಡೆದ ಸಾಕ್ಷಿ ಕತ್ತಿ

**ಉದಯರಶ್ಮಿ ನ್ಯೂಸ್**

ತಾಳಿಕೋಟಿ: ಪಟ್ಟಣದ ನಿವಾಸಿ ಕುಮಾರಿ ಸಾಕ್ಷಿ ಗುರುಸಂಗಪ್ಪ ಕಟ್ಟಿ ಇವಳು ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದಿಂದ ಸ್ನಾತಕೋತರ ಪದವಿಯಾದ ಇತಿಹಾಸ ವಿಷಯದಲ್ಲಿ ಚಿನ್ನದ ಪದಕ ಪಡೆದು ತಾಳಿಕೋಟಿಯ ಕೀರ್ತಿ ಹೆಚ್ಚಿಸಿದ್ದಾಳೆ.



ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಅಧ್ಯಯನ ಕೇಂದ್ರವಾದ ಕಲಬುರ್ಗಿಯ ವಿದ್ಯಾಲಯದಲ್ಲಿ ಅಧ್ಯಯನ ಮಾಡಿದ ಇವಳು ಅಧ್ಯಯನ ಕೇಂದ್ರಕ್ಕೆ ಪ್ರಥಮ ಸ್ಥಾನ ಹಾಗೂ ಇಡೀ ವಿಶ್ವವಿದ್ಯಾಲಯಕ್ಕೆ ಮೊದಲನೇ ಸ್ಥಾನ ಪಡೆಯುವುದರ ಮೂಲಕ ಇತಿಹಾಸ ವಿಷಯದಲ್ಲಿ ಚಿನ್ನದ ಪದಕ ಪಡೆದುಕೊಂಡಿದ್ದಾಳೆ ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿದ್ಯಾಲಯದ ಮುದ್ದೇನಹಳ್ಳಿಯಲ್ಲಿ ನಡೆದ ಘಟಕೋತ್ಸವ ಸಮಾರಂಭದಲ್ಲಿ ಕೇಂದ್ರ ಸಚಿವರಾದ ಹರಿದಿಪ್ ಸಿಂಗ್ ಪುರಿ ಇವರಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು.

ಈ ಸಮಾರಂಭದಲ್ಲಿ ಶ್ರೀ ಸದ್ಗುರು ಮಧುಸೂದನ್ ಸಾಯಿಯವರು ಹಾಗೂ ವಿಶ್ವವಿದ್ಯಾಲಯದ ಕುಲಪತಿಗಳಾದ ಬಿ ಎನ್. ನರಸಿಂಹಮೂರ್ತಿ ಅವರು ಉಪಸ್ಥಿತರಿದ್ದರು.

# ಕಲಕೇರಿಯಲ್ಲಿ ಹದಿಹರೆಯದ ಆರೋಗ್ಯ ಶಿಕ್ಷಣ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**

ಕಲಕೇರಿ: ಆದರ್ಶ ಶಿಕ್ಷಣ ಸಂಸ್ಥೆ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಕಲಕೇರಿಯ ಸಂಯುಕ್ತ ಆಶ್ರಯದಲ್ಲಿ ಹದಿಹರೆಯದ ಆರೋಗ್ಯ ಶಿಕ್ಷಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ಎಸ್ ಎಂ ಸಜ್ಜನ ಪ್ರಾಚಾರ್ಯರು ಪದವಿ ಮಹಾವಿದ್ಯಾಲಯ ಇವರು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಎಂ.ಡಿ ಮೋತಿಬಾಯಿ, ಡಾ.ಸಂತೋಷ ಟೆಂಗಳಿ, ಅಪ್ಪಸಾಬ ಮಾಂಗ ಶ್ರೀ ಫಾರೂಕ್ ವಲ್ಲಿ ಬಾಯಿ ಶ್ರೀಮತಿ ರೇಷ್ಮಾ ಮುಜಾವರ ಶ್ರೀ ಎ□□□ ಮೊಮೀನ ವಹಿಸಿದ್ದರು.

ಈ ಸಂದರ್ಭದಲ್ಲಿ ಸಸಿಗೆ ನೀರು ಉಣಿಸುವ ಮೂಲಕ



ಕಾರ್ಯಕ್ರಮ ಉದ್ಘಾಟಿಸಲಾಯಿತು.

ಈ ಸಂದರ್ಭದಲ್ಲಿ ಐ. ಸಿ. ಟಿ. ಸಿ ಆಪ್ತಸಮಾಲೋಚಕ ಡಾ. ಸಂತೋಷ ಟೆಂಗಳಿ ಮಾತನಾಡಿ, ಮಹಾಮಾರಿ ರೋಗವಾದ ಊಖಗಿ/ ಂಖಳ ಕುರಿತು ಅದು ಹರಡುವ ವಿಧಾನ ಸರ್ಕಾರದಿಂದ ಸಿಗುವ ಸೌಲಭ್ಯಗಳು ಹಾಗೂ ಯುವ ಜನತೆ ಅದರಿಂದ ಯಾವ ರೀತಿ ದೂರ ಇರಬೇಕು ಎಂಬುದರ ಬಗ್ಗೆ ಹಾಗೂ ಲೈಂಗಿಕ ರೋಗದ ಸೋಂಕುಗಳ ಬಗ್ಗೆ ವಿವರಿಸಿದರು.

ಆರ್ ಕೆ ಎಸ್ ಕೆ ಆಪ್ತ ಸಮಾಲೋಚಕ ಅಪ್ಪಸಾಬ ಮಾಂಗ ಮಾತನಾಡಿ, ಹದಿಹರೆಯದಲ್ಲಿ ಆಗುವ ದೈಹಿಕ ಮಾನಸಿಕ ಬದಲಾವಣೆಗಳು ಹಾಗೂ ಹದಿಹರೆಯದವರ ಸಮಸ್ಯೆಗಳು ಕುರಿತು ವಿವರಿಸಿದರು. ಫಾರೂಕ್ ವಲ್ಲಿಬಾಯಿ ಮಾತನಾಡಿ, ಸಾಂಕ್ರಾಮಿಕ ಮತ್ತು ಅಸಾಂಕ್ರಾಮಿಕ ರೋಗಗಳ ಕುರಿತು ವಿವರಿಸಿದರು. ಇದೇ ಸಂದರ್ಭದಲ್ಲಿ ಡೆಂಗ್ಯೂ ರೋಗದ ಲಕ್ಷಣಗಳು ಹರಡುವಿಕೆ ವಿಧಾನವನ್ನು ವಿವರಿಸಿದ್ದರು ಎಂಡಿ ಮೋತಿಬಾಯಿ ಮಾತನಾಡಿ, ಋತುಚಕ್ರ ನೈರ್ಮಲ್ಯ ಹಾಗೂ ವೈಯಕ್ತಿಕ ಸ್ವಚ್ಛತೆಯ ಕುರಿತು ವಿವರಿಸಿದರು.

ಕೊನೆಯಲ್ಲಿ ಅಧ್ಯಕ್ಷೀಯ ಭಾಷಣವನ್ನು ಎ□□□ಂ ಸಜ್ಜನ್ ಸರ್ ಅವರು ಮಾತನಾಡಿ, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ನೀಡಿದ ಆರೋಗ್ಯ ಸಲಹೆಗಳನ್ನು ಸೂಕ್ತವಾಗಿ ನಿರ್ವಹಿಸಿ ನಿಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಿ ಮತ್ತು ಇತರರಿಗೂ ಇದರ ಅರಿವು ನೀಡಿರಿ ಎಂದು ಸಲಹೆ ನೀಡಿದರು

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಸದ್ದಾಂ ಯಡ್ರಾಮಿ, ನೇಹಾ ಹೊಸಮನಿ, ಶಿರಿನ ಬಿಸನಾಳ, ಶಾಮಶಾದ ಮನಗೂಳಿ ಹಾಗೂ ಫಯಾಜ್ ಜಾಗಿರಾದಾರ ಉಪಸ್ಥಿತರಿದ್ದರು.

# ಅಪ್ಪು ಪಟ್ಟಣಶೆಟ್ಟಿ ಜನ್ಮದಿನ; ವಿಶೇಷ ಪೂಜೆ

**ಉದಯರಶ್ಮಿ ನ್ಯೂಸ್**

ಇಂಡಿ: ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಅವರ ಜನ್ಮದಿನದ ಪ್ರಯುಕ್ತ ಶನಿವಾರ ಪಟ್ಟಣದ ಆರಾಧ್ಯ ದೈವ ಶ್ರೀ ಶಾಂತೇಶ್ವರ ದೇವಸ್ಥಾನದಲ್ಲಿ ಪಟ್ಟಣಶೆಟ್ಟಿ ಅಭಿಮಾನಿಗಳು ಹಾಗೂ ಹಿತೈಷಿಗಳು ವಿಶೇಷ ಪೂಜೆ ಸಲ್ಲಿಸಿ ಸಿಹಿಹಂಚಿ ಜನ್ಮದಿನ ಆಚರಿಸಿದರು.



ಈ ಸಂದರ್ಭದಲ್ಲಿ ಶಾಂತು ಕಂಬಾರ, ಅನೀಲಗೌಡ ಬಿರಾದಾರ, ದೇವೇಂದ್ರ ಕುಂಬಾರ, ಸೋಮು ನಿಂಬರಗಿಮಠ, ಶಿವು ಬಗಲಿ, ಮಲ್ಲು ವಾಲಿಕಾರ, ಮಲ್ಲಿಕಾರ್ಜುನ ಬಿರಾದಾರ, ವಜ್ರ ಕಾಂತ ಕುಡಿಗನೂರ, ರಾಮಸಿಂಗ ಕನ್ನೊಳ್ಳಿ, ಅಶೋಕ ಅಕಲಾದಿ, ಶ್ರೀಕಾಂತ ಬಡಿಗೇರ, ಪ್ರಶಾಂತ ಲಾಳಸಂಗಿ, ಪಿ.ಸಿ. ಪೂಜಾರಿ, ಬಾಬುರಾವ್ ಶಿಂಧೆ, ಪ್ರಶಾಂತ ಗೌಳಿ, ಮಂಜುನಾಥ ದೇವರ ಸೇರಿದಂತೆ ಇನ್ನಿತರರು ಇದ್ದರು.

# ಜಲಾವೃತ ಜಮೀನು ಬೆಳೆ ಸಮೀಕ್ಷೆಗೆ ಸೂಚನೆ :ಡಿಸಿ ಭೂಬಾಲನ್

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಆಲಮಟ್ಟಿ ಜಲಾಶಯದಿಂದ ಜಲಾವೃತಗೊಂಡ ಜಮೀನಿನ ಬೆಳೆ ಸಮೀಕ್ಷೆ ನಡೆಸಲು ತಹಶೀಲ್ದಾರ್ ಗೆ ಸೂಚಿಸಿದ್ದು, ಸರ್ಕಾರದಿಂದ ಅಗತ್ಯ ಪರಿಹಾರ ಒದಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ತಿಳಿಸಿದರು.



ಆಲಮಟ್ಟಿಯಲ್ಲಿ ಶನಿವಾರ ಸುದ್ದಿಗಾರರಿಗೆ ಮಾಹಿತಿ ನೀಡಿದರು.

ಈಗ ಜಲಾವೃತಗೊಂಡ ಜಮೀನಿನಲ್ಲಿ ಈಗಾಗಲೇ ಭೂಸ್ವಾಧೀನ ಜಮೀನು ಹೆಚ್ಚಿದೆ, ಕೆಲ ಪ್ರಮಾಣದಲ್ಲಿ ಖಾಸಗಿ ಜಾಗ ಇದೆ, ಆಲಮಟ್ಟಿ ಜಲಾಶಯದಿಂದ 5 ಲಕ್ಷ ಕ್ಯುಸೆಕ್ ನೀರು ಬಿಟ್ಟಾಗ ಜಿಲ್ಲೆಯ ಕೃಷ್ಣಾ ತೀರದ 17 ಗ್ರಾಮಗಳ ಜನವಸತಿ ಪ್ರದೇಶಕ್ಕೆ ನೀರು ನುಗ್ಗಲಿದೆ. ಸದ್ಯಕ್ಕೆ ಆಲಮಟ್ಟಿಯಿಂದ 3 ಲಕ್ಷ ಕ್ಯುಸೆಕ್ ನೀರು ಬಿಟ್ಟ ಕಾರಣ ಅಪಾಯದ ಮುನ್ಸೂಚನೆ ಇಲ್ಲ ಎಂದರು.

ಜನವಸತಿ ಪ್ರದೇಶಕ್ಕೆ ನೀರು ಹೊಕ್ಕರೆ, ಕಾಳಜಿ ಕೇಂದ್ರ ತೆರೆಯಲು ಶಾಲೆ, ಸಮುದಾಯ ಭವನವನ್ನು ಗುರುತಿಸಲಾಗಿದೆ, ಗ್ರಾಮ ಆಡಳಿತಾಧಿಕಾರಿಯ ಮೂಲಕ ಗ್ರಾಮಗಳಲ್ಲಿ ಡಂಗುರ ಸಾರಿಸಲಾಗಿದ್ದು, ನಿರಂತರ ಮುನ್ಸೂಚನೆ ನೀಡಲಾಗುತ್ತದೆ, ಮುನ್ಸೂಚನೆಗೆ ಜನ ಸ್ಪಂದಿಸಬೇಕು ಎಂದರು.

2019 ರಲ್ಲಿ ಪ್ರವಾಹ ಸ್ಥಿತಿ ಉಂಟಾದಾಗ ಮಸೂತಿ ಗ್ರಾಮದ ಸುಮಾರು 20 ಕ್ಕೂ ಅಧಿಕ ಮನೆಗಳು ಜಲಾವೃತಗೊಂಡಿದ್ದವು, ಸರ್ಕಾರದ ಯಾವುದಾದರೂ ಯೋಜನೆಯಲ್ಲಿ ಅವರಿಗೆ ಮನೆ ಹಾಕಲು ನಿಡಗುಂದಿ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿಗೆ ಸೂಚಿಸಿದ್ದೇನೆ ಎಂದರು.

2024 ರ ಬೇಸಿಗೆಯಲ್ಲಿ ಜಿಲ್ಲೆಯಲ್ಲಿ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ, ಕಂದಾಯ, ಕೆಬಿಜೆಎನ್ಎಲ್, ಗ್ರಾಮೀಣಾಭಿವೃದ್ಧಿ ಇಲಾಖೆ ಸೇರಿ ಕೆಲಸ ಮಾಡಿದ್ದೇವೆ, ಮೇ ತಿಂಗಳಲ್ಲಿ ಕಾಲುವೆಯ ಕೊನೆ ಹಂತದವರೆಗೂ ನೀರು ಹರಿಸಿ ಆ ಭಾಗದ ಕೆರೆಗಳನ್ನು ಭರ್ತಿ ಮಾಡಿದ್ದೇವೆ ಎಂದರು.

ಈ ಬಾರಿ ಮುಂಗಾರು ಮಳೆ ಉತ್ತಮವಾಗಿದ್ದು, ಒಂದು ತಿಂಗಳು ಮುಂಚಿತವಾಗಿಯೇ ಜಲಾಶಯ ಬಹುತೇಕ ಭರ್ತಿಯಾಗಿದೆ, ಜನರು ನೀರನ್ನು ಹಿತಮಿತವಾಗಿ ಬಳಸಬೇಕು ಎಂದರು.

ತಹಶೀಲ್ದಾರ್ ಎ.ಡಿ. ಅಮರಾವಡಗಿ, ಜಿ.ಪಂ.ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ ಸೇರಿದಂತೆ ಕೆಬಿಜೆಎನ್ಎಲ್, ಕೃಷಿ, ಗ್ರಾಮೀಣಾಭಿವೃದ್ಧಿ ಇಲಾಖೆಯ ಅಧಿಕಾರಿಗಳು ಇದ್ದರು.

ಜಲಾಶಯ ಮಟ್ಟ: ಜಲಾಶಯದಲ್ಲಿ 516.14 ಮೀ ವರೆಗೆ ನೀರು ಇದೆ. 123 ಟಿ.ಎಂ.ಸಿ. ಗರಿಷ್ಠ ಸಂಗ್ರಹದ ಆಲಮಟ್ಟಿ ಜಲಾಶಯದಲ್ಲಿ 74.ಟಿ.ಎಂ.ಸಿ ನೀರು ಸಂಗ್ರಹವಿದೆ. ಜಲಾಶಯಕ್ಕೆ 2.38ಲಕ್ಷ ಕ್ಯುಸೆಕ್ ಒಳಹರಿವು ಇದೆ. 3.ಲಕ್ಷ ಕ್ಯುಸೆಕ್ ಹೊರಹರಿವು ಇದೆ.

255 ಮೆಗಾವಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ.

# ಬಂಥನಾಳ ಶ್ರೀ, ಹಳಕಟ್ಟಿ, ಬಿ.ಎಂ.ಪಾಟೀಲರು ಜಿಲ್ಲೆಯ ಕಾಮಧೇನು ಕಲ್ಪವೃಕ್ಷವಿದ್ದಂತೆ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಜಿಲ್ಲೆಯಲ್ಲಿ ಬಂಥನಾಳ ಲಿಂ. ಸಂಗನಬಸವ ಸ್ವಾಮೀಜಿ, ಡಾ.ಫ.ಗು.ಹಳಕಟ್ಟಿ, ದಿ.ಬಿ.ಎಂ.ಪಾಟೀಲ ಅವರು ಬಿಎಲ್ಡಿಇ ಸಂಸ್ಥೆಯ ಕಟ್ಟುವ ಮೂಲಕ ಈ ಭಾಗದಲ್ಲಿ ಶಿಕ್ಷಣ ಕೈಂಕರ್ಯ, ಆರೋಗ್ಯ ಸೇವೆ, ಅನೇಕರಿಗೆ ಉದ್ಯೋಗ ನೀಡುವ ಮೂಲಕ ಜಿಲ್ಲೆಯ ಕಾಮಧೇನು ಕಲ್ಪವೃಕ್ಷದಂತೆ ತ್ರಿವಳಿ ಪುರುಷರು ಕಂಗೊಳಿಸುತ್ತಿದ್ದಾರೆ. ಇವರ ಮಾಡಿರುವ ಕಾರ್ಯ ಸದಾ ಸ್ಮರಣೀಯವಾಗಿದೆ ಎಂದು ಬಸವೇಶ್ವರ ಕಲಾ ಮತ್ತು ಮಹಾವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ರವೀಂದ್ರಗೌಡ ಕೆ. ಹೇಳಿದರು.

ಪಟ್ಟಣದ ಬಿಎಲ್ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಬಂಥನಾಳದ ಲಿಂ. ಸಂಗನಬಸವ ಸ್ವಾಮೀಜಿ, ಡಾ.ಫ.ಗು. ಹಳಕಟ್ಟಿ, ದಿ.ಬಿ.ಎಂ.ಪಾಟೀಲ ಅವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ನಂತರ ಮಾತನಾಡಿದ ಅವರು, ಬಿಎಲ್ಡಿಇ ಸಂಸ್ಥೆಯ ಬಹುಎತ್ತರಕ್ಕೆ ಬೆಳೆಯುವಲ್ಲಿ ಈ ಮಹನೀಯರ ಪಾತ್ರ ಮರೆಯುವಂತಿಲ್ಲ. ಗ್ರಾಮೀಣ ಬಡ ಹಾಗೂ ಜನಸಾಮಾನ್ಯರಿಗೆ ತಮ್ಮ ಬದುಕನ್ನು ಕಟ್ಟಿಕೊಳ್ಳಲು ಈ ಸಂಸ್ಥೆಯು ಎಲ್ಲ ರೀತಿಯಿಂದಲೂ ಸದಾ ನೆರವು ನೀಡುತ್ತಿದೆ. ಸಂಸ್ಥೆಯಲ್ಲಿ ಸೇವೆ ಸಲ್ಲಿಸುವ ಜನರು ಸೇರಿದಂತೆ ಜಿಲ್ಲೆಯ ಜನರು ಇವರ ಸೇವೆಯನ್ನು ಸದಾ ಸ್ಮರಿಸಬೇಕೆಂದರು.

ಕಾರ್ಯಕ್ರಮದಲ್ಲಿ ಡಾ.ವೈ.ಬಿ.ನಾಯಕ, ಪ್ರೊ.ಡಿ.ಎಸ್.ಲಗಳಿ,ಪ್ರೊ.ಡಿ.ಎನ್.ಕೊನಂತಲಿ, ಡಾ.ಎಸ್.ಬಿ.ಜನಗೊಂಡ, ಎಂ.ಕೆ. ಯಾಧವ, ಎಸ್.ಜೆ.ಸೂರ್ಯವಂಶಿ, ಪಿ.ಎಸ್.ಹೊರಕೇರಿ, ಪಿ.ಎಸ್.ನಾಟೀಕಾರ, ಎಂ.ಆರ್. ಮಮದಾಪುರ, ಜಯರಾಮರೆಡ್ಡಿ, ಆರ್.ಎನ್. ರಾಠೋಡ, ರುಕ್ಷನಾ ಮುಜಾವರ, ಜಲಪುರ ಸೇರಿದಂತೆ ಇತರರು ಇದ್ದರು.

ಸಂಸ್ಥೆಯ ಔಷಧ, ಪಪೂ ವಿದ್ಯಾಲಯದಲ್ಲಿ ಪುಣ್ಯಸ್ಮರಣೆಃ ಬಿಎಲ್ಡಿಇ ಸಂಸ್ಥೆಯ ಔಷಧ ಮಹಾವಿದ್ಯಾಲಯ ಹಾಗೂ ಪದವಿ ಪೂರ್ವ ಕಾಲೇಜಿನಲ್ಲಿಯೂ ಡಾ.ಫ.ಗು.ಹಳಕಟ್ಟಿ, ಬಂಥ–'ನಾಳ ಸಂಗನಬಸವ ಸ್ವಾಮೀಜಿ, ದಿ.ಬಿ.ಎಂ.ಪಾಟೀಲ ಅವರ ಪುಣ್ಯಸ್ಮರಣೆ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಪ್ರೊ. ಮಹಾಂತೇಶ ಕವಟೇಕರ ಮಾತನಾಡಿ, ಉನ್ನತ ಶಿಕ್ಷಣಕ್ಕಾಗಿ ದೂರ ಧಾರವಾಡ, ಮುಂಬೈ, ಪುಣೆಗೆ ಹೋಗುವ ಪರಿಸ್ಥಿತಿ ಈ ಭಾಗದ ಜನರಿಗೆ ಇತ್ತು. ಇಂದು ಮೂರು ಮಹಾನುಭಾವರ ಅವಿರತ ಪ್ರಯತ್ನದ ಫಲವಾಗಿ ಈ ಭಾಗದ ಜನರು ಬಿಎಲ್ಡಿಇ ಸಂಸ್ಥೆಯಲ್ಲಿಯೆ ಉನ್ನತ ಶಿಕ್ಷಣ ಪಡೆಯುವಂತಾಗಿದೆ. ಇವರಿಗೆ ಜಿಲ್ಲೆಯ ಜನತೆ ಸದಾ ಋಣಿಯಾಗಿರಬೇಕೆಂದರು.

ಈ ಸಂದರ್ಭದಲ್ಲಿ ಎರಡು ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿಗಳು ಇದ್ದರು.

# ಒಲಂಪಿಕ್ ಕ್ರೀಡಾಕೂಟಗಳು 2024

**ಉದಯರಶ್ಮಿ ದಿನಪತ್ರಿಕೆ**

ನನ್ನ ಮಗ ಪ್ರಾಥಮಿಕ ಶಾಲೆಯಲ್ಲಿ ಓದುತ್ತಿದ್ದಾಗ ಇಂಗ್ಲಿಷ್ ನಲ್ಲಿ ಪಠ್ಯವೊಂದು ಇತ್ತು. ಆ ಪಠ್ಯದ ಒಂದು ವಾಕ್ಯ ಇಂದಿಗೂ ನನ್ನ ಮನಸ್ಸಿಗೆ ಅತ್ಯಂತ ಹತ್ತಿರವಾಗಿದೆ. ಬಹುಶಹ ಎಲ್ಲರ ಬದುಕಿಗೂ ಈ ವಾಕ್ಯ ಅನ್ವಯಿಸುತ್ತದೆ. ತುಸು

**ವೀಣಾಂತರಂಗ**



–ವೀಣಾ ಎಚ್. ಪಾಟೀಲ್, ಮುಂಡರಗಿ

ದೊಡ್ಡದಾಗಿದ್ದ ಆ ವಾಕ್ಯವನ್ನು ಒಂದು ವಾಕ್ಯದ ಉತ್ತರಕ್ಕಾಗಿ ನಾನು ಸರಳೀಕರಿಸಿ ಚಿಕ್ಕದಾಗಿಸಿದಾಗ ಪ್ರಾರಂಭದಲ್ಲಿ ಅದನ್ನು ಬರೆಯಲು ಒಪ್ಪದ ನನ್ನ ಮಗ ನಂತರ ನನ್ನ ಮಾವ ಮತ್ತು ಶಿಕ್ಷಕರು ನಾನು ಬರೆದ ರೀತಿಯೇ ಸರಿಯಾಗಿದೆ ಎಂದು ಹೇಳಿದಾಗ ಅದನ್ನು ಬರೆಯಲು ಒಪ್ಪಿಕೊಂಡ.

ಆ ವಾಕ್ಯ ಹೀಗಿದೆ "ದ ಮೇನ್ ಮೋಟೋ ಆಫ್ ಒಲಂಪಿಕ್ ಗೇಮ್ಸ್ ಇಸ್ ನಾಟ್ ಟು ವಿನ್, ಬಟ್ ಟು ಪಾರ್ಟಿಸಿಪೇಟ್". ಇದರ ಅರ್ಥ ಒಲಂಪಿಕ್ ಆಟಗಳ ಮುಖ್ಯ ಧ್ಯೇಯ ಇರುವುದು ಆಟದಲ್ಲಿ ಪಾಲ್ಗೊಳ್ಳುವುದರಲ್ಲಿಯೇ ಹೊರತು ಗೆಲ್ಲುವುದರಲ್ಲಿ ಅಲ್ಲ ಎಂದು.

ವಿಶ್ವದ ಬಹುತೇಕ ಎಲ್ಲ ರಾಷ್ಟ್ರಗಳು ಭಾಗವಹಿಸುವ

ಒಲಂಪಿಕ್ ಗೇಮ್ಸ್ ನ ಇತಿಹಾಸ ಅತ್ಯಂತ ಪುರಾತನವಾದದ್ದು. ಕ್ರಿಸ್ತಪೂರ್ವ ಏಳನೇ ಶತಮಾನದಲ್ಲಿ ಗ್ರೀಸ್ ನ ಒಲಿಂಪಿಯದಲ್ಲಿ ಈ ಆಟವನ್ನು ಆಯೋಜಿಸಲಾಗುತ್ತಿತ್ತು. ಒಲಂಪಿಯಾದ ಬಳಿ ಇರುವ ದೇವಸ್ಥಾನ ಒಂದರಲ್ಲಿ ಧಾರ್ಮಿಕ ವಿಧಿ ವಿಧಾನಗಳ ಜೊತೆಗೆ ಕ್ರೀಡಾಕೂಟವನ್ನು ಕೂಡ ಆಯೋಜಿಸಲಾಗುತ್ತಿತ್ತು ಆಗ ಇದು ಕೇವಲ ಒಂದು ದಿನದ ಕ್ರೀಡಾಕೂಟವಾಗಿ–ತ್ತು. ಸ್ನೇಹ ವರ್ಧನೆಯ ಸಲುವಾಗಿ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿತ್ತು. ಉಳಿದ ಸಮಯದಲ್ಲಿ ಅಂತರ್ಯುದ್ಧದಲ್ಲಿ ತೊಡಗಿಕೊಂಡಿರುತ್ತಿದ್ದ ಗ್ರೀಕ್ ರಾಷ್ಟ್ರಗಳು ಕ್ರೀಡಾಕೂಟದ ಸಮಯದಲ್ಲಿ ಪರಸ್ಪರ ಸ್ನೇಹ, ಸೌಹಾರ್ದ ಭಾವವನ್ನು ಹೊಂದಿರುತ್ತಿದ್ದರು.

ಒಲಂಪಿಯ ಕ್ರೀಡೆಗಳಿಗೆ



ಅತ್ಯಂತ ಮಾನ್ಯತೆ ಮತ್ತು ಗೌರವಗಳು ದೊರೆಯುತ್ತಿದ್ದ ಕಾರಣ ರಾಜ ಮಹಾರಾಜರು ಕೂಡ ಈ ಸ್ಪರ್ಧೆಗಳಲ್ಲಿ ಭಾಗವಹಿಸಲು ಹಾತೊರೆಯುತ್ತಿದ್ದರು. ರೋಮ್ ಸಾಮ್ರಾಜ್ಯದ ದೊರೆ ನೀರೋ ಕೂಡ ಈ ಸ್ಪರ್ಧಿಗಳಲ್ಲಿ ಒಬ್ಬನಾಗಿರುತ್ತಿದ್ದನು.

ಸ್ಪರ್ಧೆಗಳಲ್ಲಿ ಗೆದ್ದವರ ಆಕೃತಿಗಳನ್ನು ಸಂಗಮವರಿ ಕಲ್ಲಿನಲ್ಲಿ ಕೆತ್ತಿ ಅಲ್ಲಲ್ಲಿ ಪ್ರದರ್ಶನಕ್ಕಿಡಲಾಗುತ್ತಿತ್ತು. ಅವರ ಕುರಿತು ಪದಗಳನ್ನು ಕಟ್ಟಿ ಹಾಡಲಾಗುತ್ತಿತ್ತು, ನರ್ತನ, ಗಾಯನ, ಸಂಗೀತಗಳು ಮತ್ತು ಸರ್ಕಾರಿ ಸಮಾರಂಭಗಳು ನಡೆಯುತ್ತಿದ್ದವು, ಕ್ರೀಡಾಕೂಟದಲ್ಲಿ ವಿಜೇತರಾದವರಿಗೆ 'ರಾಷ್ಟ್ರವೀರ' ಎಂಬ ಗೌರವ ಪ್ರಾಪ್ತವಾಗುತ್ತಿತ್ತು. ಆದ್ದರಿಂದ ಈ ಕ್ರೀಡಾಕೂಟಗಳಿಗೆ ಹೆಚ್ಚಿನ ಮಾನ್ಯತೆ ಇತ್ತು.

ಸುಮಾರು 400 ವರ್ಷಗಳವರೆಗೆ ಈ ಕ್ರೀಡಾಕೂಟ ನಡೆಯಿತು.

ಕಾರಣಾಂತರಗಳಿಂದ ನಿಂತು ಹೋದ ಈ ಕ್ರೀಡಾಕೂಟವನ್ನು ಮತ್ತೆ 18ನೇ ಶತಮಾನದ ಉತ್ತರಾರ್ಧದಲ್ಲಿ ಆರಂಭಿಸಲು ಉತ್ಸಾಹ ತೋರಿದ ವ್ಯಕ್ತಿ ಕವಿ ಮತ್ತು ಪತ್ರಕರ್ತರಾದ ಪನಾಜಿಯೋಟಿಸ್ ಸೌಟ್ಸಾಸ್. ಮುಂದೆ 1896ರಲ್ಲಿ ಗ್ರೀಸ್ ದೇಶದ ಅಥೇನ್ಸ್ ನಲ್ಲಿ ಕ್ರೀಡಾಕೂಟವನ್ನು ಮತ್ತೆ ಆಯೋಜಿಸಲಾಯಿತು. ಫ್ರಾನ್ಸ್ ದೇಶದ ಪಿಯರಿ ಡಿ ಕೊಬರ್ತಿ ಎಂಬ ವ್ಯಕ್ತಿ ಪ್ಯಾರಿಸ್ ನಲ್ಲಿ ನಡೆದ ಒಲಂಪಿಕ್ ವಸ್ತು ಪ್ರದರ್ಶನವನ್ನು ಕಂಡು ಬೆರಗಾಗಿ ಮತ್ತೆ ಒಲಂಪಿಕ್ ಕ್ರೀಡೆಗಳನ್ನು ಆರಂಭಿಸಬೇಕೆಂದು 1892 ರಲ್ಲಿ ಅಂತರರಾಷ್ಟ್ರೀಯ ಕ್ರೀಡಾ ಸಮ್ಮೇಳನದಲ್ಲಿ ಒತ್ತಾಯಿಸಿದನು. ಆದರೆ ಈತನ ಒತ್ತಾಯ ಫಲಪ್ರದವಾಗದೆ ಹೋಯಿತು. ನಿರಾಶನಾಗದ ಪಿಯರಿ ಕ್ರೀಡಾ



ಅಧಿವೇಶನವೊಂದನ್ನು ಆಯೋಜಿಸಿ ಅಲ್ಲಿ ಮತ್ತೊಮ್ಮೆ ಈ ವಿಷಯವನ್ನು ಪ್ರಸ್ತಾಪಿಸಿದಾಗ ಎಲ್ಲರೂ ಒಲಂಪಿಕ್ ಕ್ರೀಡಾಕೂಟಗಳನ್ನು ನಡೆಸಲು ಅಂಗೀಕರಿಸಿದರು. ಕೊಬರ್ತಿ ಮೊದಲ ಕ್ರೀಡಾಕೂಟವನ್ನು ಪ್ಯಾರಿಸ್ ನಲ್ಲಿ ನಡೆಸಲು ಇಚ್ಛಿಸಿದ ಆದರೆ ಗ್ರೀಸ್ ನ ಜನರ ಒತ್ತಾಸೆಯ ಮೇರೆಗೆ 1896ರಲ್ಲಿ ಒಲಂಪಿಕ್ ಕ್ರೀಡಾಕೂಟಗಳು ಗ್ರೀಸ್ ದೇಶದ ಅಥೆನ್ಸ್ ನಲ್ಲಿಯೇ ಪುನರಾರಂಭಗೊಂಡವು. ಅಂದು ಕೆಲವೇ ದೇಶಗಳು ಪಾಲ್ಗೊಂಡು ಆರಂಭಿಸಿದ ಈ ಕ್ರೀಡಾಕೂಟ ಇಂದು ವಿಶ್ವದ ಬಹುತೇಕ ಎಲ್ಲಾ ರಾಷ್ಟ್ರಗಳು ಪಾಲ್ಗೊಂಡು ಸಂಭ್ರಮಿಸುವಂತಹ ಬಹುದೊಡ್ಡ ಕ್ರೀಡಾ ಹಬ್ಬವಾಗಿದೆ.

ಒಲಂಪಿಕ್ ನ ಐದು ವೃತ್ತಗಳು ಪ್ರಪಂಚದ ಐದು ಖಂಡಗಳನ್ನು ಪ್ರತಿನಿಧಿಸುತ್ತಿದ್ದು ಅವುಗಳಲ್ಲಿ ಉತ್ತರ ಮತ್ತು ದಕ್ಷಿಣ ಅಮೆ–ರಿಕವನ್ನು ಒಂದೇಖಂಡವೆಂದು ಗುರುತಿಸಲಾಗುತ್ತದೆ.ವೃತ್ತಗಳು ಹೊಂದಿರುವ ಬಣ್ಣಗಳನ್ನು ಒಲಂಪಿಕ್ ಕ್ರೀಡಾಕೂಟದಲ್ಲಿ ಭಾಗವಹಿಸುವ ವಿಶ್ವದ ಎಲ್ಲ ರಾಷ್ಟ್ರಗಳ ಧ್ವಜಗಳಲ್ಲಿ ಒಂದಲ್ಲ ಒಂದು ಬಣ್ಣವು ಇರುವುದು.

ಒಲಂಪಿಕ್ ಕ್ರೀಡಾಕೂಟವನ್ನು ಬೇಸಿಗೆಯ ಮತ್ತು ಚಳಿಗಾಲದ ಕ್ರೀಡಾಕೂಟಗಳೆಂದು ಎರಡು ವಿಭಾಗಗಳಾಗಿ ಆಡಲಾಗುತ್ತದೆ. ಪ್ರತಿ ನಾಲ್ಕು ವರ್ಷಕ್ಕೊಮ್ಮೆ ವಿಶ್ವದ ವಿವಿಧೆಡೆ ಆಯೋಜಿಸುತ್ತಿದ್ದು ಇದೀಗ ಪ್ಯಾರಿಸ್ ನಲ್ಲಿ ನಾಳೆಯಿಂದ ಈ ಕ್ರೀಡಾಕೂಟಗಳು ನಡೆಯುತ್ತಿವೆ.ಭಾರತದ ಸುಮಾರು 117 ಕ್ಕೂ ಹೆಚ್ಚು ಆಟಗಾರರು ಈ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಮೊದಲು ಕೇವಲ ಒಂದು ದಿನದ ಕ್ರೀಡಾಕೂಟವಾಗಿ ಪ್ರಾರಂಭವಾದ ಒಲಂಪಿಕ್ ಕ್ರೀಡಾಕೂಟದಲ್ಲಿ ಇಂದು ಹಲವಾರು ಕ್ರೀಡೆಗಳನ್ನು ಸೇರಿಸಲಾಗಿದೆ. ಗುಂಪು ಕ್ರೀಡೆಗಳಲ್ಲಿ, ಅಥ್ಲೆಟಿಕ್ಸ್ ಗಳಲ್ಲಿ ಗೆದ್ದ ವ್ಯಕ್ತಿಗಳಿಗೆ ರಾಷ್ಟ್ರ ಮಟ್ಟದ ಗೌರವ ಪ್ರಾಪ್ತವಾಗುತ್ತದೆ. ಅಂತಹ ಕ್ರೀಡಾಪಟುಗಳು ಆ ರಾಷ್ಟ್ರದ ದಂತ ಕಥೆಗಳಾಗಿ ಪರಿಚಿತರಾಗುತ್ತಾರೆ. ಭಾರತವು ಕೂಡ ಕೆಲವೇ ಕೆಲವು ಪದಕಗಳನ್ನು ಈವರೆಗೆ ಪಡೆದುಕೊಂಡಿದ್ದು ಪದಕ ಪಟ್ಟಿಯಲ್ಲಿ ಬಹಳ ಹಿಂದೆ ಉಳಿದುಹೋಗಿದೆ.

ವಿಶ್ವದಲ್ಲಿಯೇ ಅತಿ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ಭಾರತ ದೇಶವು ಪದಕ ಪಟ್ಟಿಯಲ್ಲಿ ಹಿಂದುಳಿದಿರಲು ನಮ್ಮ ದೇಶದಲ್ಲಿ ಕ್ರೀಡೆಗೆ ತೋರುತ್ತಿರುವ ಅಸಡ್ಡೆ, ಅನಾದರಗಳೇ ಕಾರಣ. ಕ್ರೀಡೆಗಾಗಿ ತನ್ನ ಬದುಕನ್ನು ಸಮರ್ಪಿಸುವ ಕ್ರೀಡಾಪಟುವಿಗೆ ಆರ್ಥಿಕ ತೊಂದರೆಗಳು ತಪ್ಪುವುದಿಲ್ಲ.

ಇನ್ನು ಕ್ರೀಡೆಗಾಗಿ ತಮ್ಮನ್ನು ತಾವು ಸಜ್ಜುಗೊಳಿಸಿಕೊಳ್ಳಲು ಕ್ರೀಡಾಪಟುಗಳಿಗೆ ಒಳ್ಳೆಯ ಆಹಾರ ಗುಣಮಟ್ಟದ ತರಬೇತಿ ಮತ್ತು ತರಬೇತುದಾರರ ಅವಶ್ಯಕತೆ ಇದ್ದು ನಮ್ಮ ಆಡಳಿತ ಶಾಹಿಯ ವಿಫಲತೆಯಿಂದಾಗಿ, ಅಧಿಕಾರಿ



ವರ್ಗದ ಬೇಜವಾಬ್ದಾರಿತನದಿಂದ, ಕ್ರೀಡಾ ಪ್ರಾಧಿಕಾರದ ವಿಳಂಬ ನೀತಿಗಳಿಂದ ಭಾರತೀಯ ಕ್ರೀಡಾ ಲೋಕ ಅವ್ಯವಸ್ಥಿತವಾಗಿದ್ದು ಅಂತರಾಷ್ಟ್ರೀಯ ಗುಣಮಟ್ಟವನ್ನು ಸರಿದೂಗಿಸುವ ದೈಹಿಕ ಸದೃಢತೆಯನ್ನು ಉಳಿಸಿಕೊಳ್ಳಲು ಅವಶ್ಯಕವಾದ ಕ್ರೀಡಾ ಚಾಕಚಕ್ಯತೆಯ




ತರಬೇತಿಯಾಗಲಿ, ಆಹಾರ ಮತ್ತು ಕೌಶಲವಾಗಲಿ ನಮ್ಮಲ್ಲಿ ಕ್ರೀಡಾಪಟುಗಳಿಗೆ ದೊರೆಯುತ್ತಿಲ್ಲ. ಇದು ಪದಕಗಳ ಗಳಿಕೆಯಲ್ಲಿ ನಮ್ಮನ್ನು ಕೊನೆಯ ಸ್ಥಾನಕ್ಕೆ ದೂಡುತ್ತಿದೆ.

ಕೆಲ ಸಿರಿವಂತ ಕ್ರೀಡಾಪಟುಗಳು ತಮ್ಮ ಸ್ವಂತ ಹಣ ಖರ್ಚು ಮಾಡಿ ತರಬೇತಿ ಪಡೆದು ಪದಕಗಳನ್ನು ಗಳಿಸಿದ್ದಾರೆ ನಿಜ, ಆದರೆ ಇದರಲ್ಲಿ ಸರ್ಕಾರದ ಸಾಧನೆ ಶೂನ್ಯ.

ವಿಜ್ಞಾನ, ತಂತ್ರಜ್ಞಾನ ಉನ್ನತ ವಿದ್ಯಾಭ್ಯಾಸ, ಗಳಿಕೆ, ಆರ್ಥಿಕ ಅಭಿವೃದ್ಧಿ ಮತ್ತು ಆರ್ಥಿಕ ಸ್ಥಿರತೆಗಳಿಗಷ್ಟೇ ಮಹತ್ವ ಕೊಟ್ಟರೆ ಒಂದು ಇಡೀ ಜನಾಂಗ ಕ್ರೀಡೆಯಂತಹ ಮನೋದೈಹಿಕ ಸಾಮರ್ಥ್ಯವನ್ನು ನಿರ್ವಹಿಸುವ, ಪೋಷಿಸುವ ಅಭಿವೃದ್ಧಿಗೊಳಿಸುವ ಶಕ್ತಿಯನ್ನು ಕಳೆದುಕೊಳ್ಳುತ್ತದೆ.

ಇನ್ನಾದರೂ ಸರ್ಕಾರಗಳು ಎಚ್ಚೆತ್ತುಕೊಂಡು ಯಾವುದೇ ರಾಜಕೀಯ ಮಾಡದೆ, ಶ್ರದ್ಧೆಯಿಂದ ಕಾರ್ಯನಿರ್ವಹಿಸಿದರೆ ಮುಂದಿನ ವರ್ಷಗಳಲ್ಲಿ ವಿಶ್ವದಲ್ಲಿಯೇ ಅತಿ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ಭಾರತ ಪದಕ ಪಟ್ಟಿಯಲ್ಲಿ ಮೊದಲ 30 ರಾಷ್ಟ್ರಗಳಲ್ಲಾದರೂ ಬರುತ್ತದೆ ಎಂಬ ಭರವಸೆ ಮೂಡುತ್ತದೆ.

ಯುದ್ಧಕಾಲೇ ಶಸ್ತ್ರಾಭ್ಯಾಸ ಎಂಬ ಮಾತನ್ನು ನೀವು ಕೇಳಿರಬಹುದು..... ಹಾಗೆ ಪ್ರತಿ ಬಾರಿ ಒಲಂಪಿಕ್ ಕ್ರೀಡೆಗಳಲ್ಲಿ ಭಾಗವಹಿಸಲು ಕ್ರೀಡಾಪಟುಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆ ವಿಳಂಬಗೊಂಡು, ಅವರ ತರಬೇತಿಯಲ್ಲಿ ವ್ಯತ್ಯಯವಾಗುವುದು ನಂತರ ಕ್ರೀಡಾಕೂಟಗಳು ನಡೆಯುವ ಸ್ಥಳಕ್ಕೆ ಹೋಗಲು ಬೇಕಾಗುವ ಅವಶ್ಯಕ ದಾಖಲಾತಿಗಳು, ವಿಮಾನ ಪ್ರಯಾಣದ ಟಿಕೆಟ್ ಮುಂತಾದ ವಿಷಯಗಳಲ್ಲಿ ಸಮಯ ಕಳೆದು ಹೋಗಿರುವ ಘಟನೆಗಳು ಕೂಡ ಸಾಕಷ್ಟಿವೆ.

2024ರ ಒಲಂಪಿಕ್ ಕ್ರೀಡೆಗಳು ಈ ಬಾರಿ ಪ್ಯಾರಿಸ್ ನಲ್ಲಿ ನಡೆಯುತ್ತಿದ್ದು ಈ ಕ್ರೀಡೆಗಳಲ್ಲಿ ನಮ್ಮ ಭಾರತೀಯ ಕ್ರೀಡಾಪಟುಗಳು ಉತ್ತಮ ಸಾಧನೆ, ತೋರಲಿ, ಭಾರತ ದೇಶದ ಹೆಮ್ಮೆಯ ಧ್ವಜವನ್ನು ಬಾನೆತ್ತರದಲ್ಲಿ ಹಾರಿಸಲಿ ಎಂದು 140 ಕೋಟಿ ಭಾರತೀಯರ ಹಾರೈಕೆ ಫಲಪ್ರದವಾಗಲಿ.

# ಹಡಪದ ಅಪ್ಪಣ್ಣ ಸೇವಾ ಸಮಿತಿಗೆ ಪದಾಧಿಕಾರಿಗಳ ಆಯ್ಕೆ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ಪಟ್ಟಣದ ನಂದಿ ಬಡಾವಣೆಯಲ್ಲಿರುವ ಹಡಪದ ಅಪ್ಪಣ್ಣ ಸಮುದಾಯ ಭವನದಲ್ಲಿ ಹಡಪದ ಸಮಾಜ ಬಾಂಧವರು ಶನಿವಾರ ಸಭೆ ಸೇರಿ ನೂತನವಾಗಿ ರಚಿಸಲಾದ ಹಡಪದ ಅಪ್ಪಣ್ಣ ಸೇವಾ ಸಮಿತಿಗೆ ಪದಾಧಿಕಾರಿಗಳನ್ನು ಆಯ್ಕೆ ಮಾಡಿದರು.

ಹಡಪದ ಅಪ್ಪಣ್ಣ ಸೇವಾ ಸಮಿತಿ ಅಧ್ಯಕ್ಷರನ್ನಾಗಿ ಮಹಾಂತೇಶ ಹಡಪದ, ಉಪಾಧ್ಯಕ್ಷರನ್ನಾಗಿ ಮಹೇಶ ನಾಗೂರ, ಪ್ರಧಾನ ಕಾರ್ಯದರ್ಶಿಯಾಗಿ ಬಸವರಾಜ ಹಡಪದ, ಖಜಾಂಚಿಯಾಗಿ ಮಲ್ಲು ಹಡಪದ, ಕಾರ್ಯದರ್ಶಿಯಾಗಿ ಬಸವರಾಜ ಮುತ್ತಗಿ, ಸಂಘಟನಾ ಕಾರ್ಯದರ್ಶಿಯಾಗಿ ರಾಜು ಹಡಪದ, ಸದಸ್ಯರಾಗಿ ನಾಗೇಶ ನಾಗೂರ, ಮಂಜುನಾಥ ಹಡಪದ, ಮಹಾಂತೇಶ ಹಡಪದ, ಸಂಜು ಹಡಪದ, ರವಿ ಹಡಪದ ಅವರನ್ನು ಸಭೆಯು ಸರ್ವಾನುಮತದಿಂದ ಆಯ್ಕೆ ಮಾಡಿತು. ಸಮಿತಿಗೆ ಆಯ್ಕೆಯಾದ ಪದಾಧಿಕಾ–ರಿಗಳನ್ನು ನಂತರ ಸಮಾಜದಿಂದ ಸನ್ಮಾನಿಸಲಾಯಿತು.

ಸಭೆಯನ್ನು ಉದ್ದೇಶಿಸಿ ಸಮಾಜದ ಮುಖಂಡರಾದ ಗುರಲಿಂಗ ಹಡಪದ, ಸುಭಾಸ ಹಡಪದ, ಚನ್ನು ಹಡಪದ ಮಾತನಾಡಿ, ನೂತನವಾಗಿ ರಚಿಸಿರುವ ಹಡಪದ ಅಪ್ಪಣ್ಣ ಸೇವಾ ಸಮಿತಿಗೆ ಆಯ್ಕೆಯಾದ ಪದಾಧಿಕಾರಿಗಳು ಪ್ರಾಮಾಣಿಕವಾಗಿ ಸೇವೆ ಮಾಡುವ ಮೂಲಕ ಸಮಾಜದ ಸಂಘಟನೆ ಮಾಡುವ ಜೊತೆಗೆ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು. ಸಮುದಾಯ ಭವನ ಇನ್ನಷ್ಟು ವಿಶಾಲವಾಗಿ ನಿರ್ಮಾಣಕ್ಕೆ ಎಲ್ಲರೂ ಒಂದಾಗಿ ಸರ್ಕಾರದ ಸಹಾಯ ಪಡೆದುಕೊಳ್ಳಬೇಕಿದೆ. ಇದಕ್ಕಾಗಿ ಜನಪ್ರತಿನಿಧಿಗಳನ್ನು ಮುಂದಿನ ದಿನಗಳಲ್ಲಿ ಭೇಟಿ ಮಾಡುವದು ಅಗತ್ಯವಿದೆ. ಸಮಾಜದ ಶ್ರೇಯೋಭಿವೃದ್ಧಿಗೆ ಸಮಾಜದ ಎಲ್ಲ ಬಾಂಧವರು ಸಹಕಾರ ನೀಡಬೇಕೆಂದರು.

ಸಭೆಯಲ್ಲಿ ಮುತ್ತಪ್ಪ ಹಡಪದ, ಮಲ್ಲಿಕಾರ್ಜುನ ಹಡಪದ, ಈರಣ್ಣ ದವಾಖಾನೆ, ಅಶೋಕ ಬಾಗೇವಾಡಿ, ಅಮಿತ ಇವಣಗಿ, ಮಲಕಾಜಿ ಇವಣಗಿ, ಕಲ್ಲಪ್ಪ ಹಡಪದ, ಶಿವಾನಂದ ಹಡಪದ, ಪ್ರಲ್ಹಾದ ಹಡಪದ, ಶಿವಪ್ಪ ಹಡಪದ, ಚನ್ನಪ್ಪ ಹಡಪದ, ಸುರೇಶ ಹಡಪದ, ಉಮೇಶ ಹಡಪದ, ಪರಮಾನಂದ ಹಡಪದ, ಮಲ್ಲಿಕಾರ್ಜುನ ಹಡಪದ, ರಾಮು ಚಿಕ್ಕೂರ, ಶ್ರೀಶೈಲ ಹಡಪದ, ಸಂಗು ಹಡಪದ, ಕಿರಣ ನಾಗೂರ,ರಾಜು ಹಡಪದ ಇತರರು ಇದ್ದರು.

# ಇಂದು ಬಸವರಾಜ ನಂದಿಹಾಳ, ಪ್ರಕಾಶ ಬೆಣ್ಣೂರ ಗೆ ಕಾನಿಪ ಪ್ರಶಸ್ತಿ ಪ್ರದಾನ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕವು 2024 ನೇ ಸಾಲಿನಲ್ಲಿ ಕೊಡಮಾಡುವ ಜಿಲ್ಲಾ ವಾರ್ಷಿಕ ಪ್ರಶಸ್ತಿಗೆ ಬಸವನಬಾಗೇವಾಡಿ ತಾಲೂಕಿನ ಕನ್ನಡಪ್ರಭ ವರದಿಗಾರ, ಹಿರಿಯ ಪತ್ರಕರ್ತ ಬಸವರಾಜ ನಂದಿಹಾಳ, ವಿಜಯವಾಣಿ, ಉದಯವಾಣಿ ತಾಲೂಕು ವರದಿಗಾರ, ಹಿರಿಯ ಪತ್ರಕರ್ತ ಪ್ರಕಾಶ ಬೆಣ್ಣೂರ ಹಾಗೂ ಮನಗೂಳಿ ತಾಲೂಕಿನ ಪತ್ರಿಕಾ ವಿತರಕ ಶಿವಾಜಿ ಮೋರೆ ಅವರು ಆಯ್ಕೆಯಾಗಿದ್ದಾರೆ.

ಜು.28 ರಂದು ವಿಜಯಪುರದ ಸೋಲಾಪುರ ರಸ್ತೆಯಲ್ಲಿರುವ ಪೊಲೀಸ್ ಪರೇಡ್ ಮೈದಾನದ ಎದುರು ಇರುವ ಪೊಲೀಸ್ ಸಮುದಾಯ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕವು ಮಧ್ಯಾನ್ಹ 3 ಗಂಟೆಗೆ ಹಮ್ಮಿಕೊಂಡಿರುವ ಪತ್ರಿಕಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಇವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಅಜೀಜ ಬಳಬಟ್ಟಿ ತಿಳಿಸಿದ್ದಾರೆ.



## ಕಾರ್ಯನಿರತ ಪತ್ರಕರ್ತರ ಸಂಘ, ವಿಜಯಪುರ ಜಿಲ್ಲಾ ಘಟಕದಿಂದ ಆಯೋಜನೆ

# ಇಂದು ಪತ್ರಿಕಾ ದಿನಾಚರಣೆ, ಪ್ರತಿಭಾ ಪುರಸ್ಕಾರ & ವಾರ್ಷಿಕ ಪ್ರಶಸ್ತಿ ಪ್ರದಾನ

ಉದಯರಶ್ಮಿ ನ್ಯೂಸ್



**ಕೆ.ವಿ.ಪ್ರಭಾಕರ**
ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರು

*ಶ್ರೀ ಶಿವಾನಂದ ತಗಡೂರ
ರಾಜ್ಯಾಧ್ಯಕ್ಷರು, ಕಾನಿಪ ಸಂಘ, ಬೆಂಗಳೂರು

ವಿಜಯಪುರ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಪತ್ರಿಕಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಹಾಗೂ ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ ಜು. 28ರಂದು ಮಧ್ಯಾಹ್ನ 3 ಗಂಟೆಗೆ ನಗರದ ಪೊಲೀಸ್ ಕವಾಯತು ಮೈದಾನ ಎದುರಿಗಿರುವ ಪೊಲೀಸ್ ಸಮುದಾಯ ಭವನದಲ್ಲಿ ನಡೆಯಲಿದೆ.

ಬೃಹತ್ ಕೈಗಾರಿಕೆ, ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಮತ್ತು ಎಪಿಎಂಸಿ ಸಚಿವ ಶಿವಾನಂದ ಪಾಟೀಲ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸುವರು. ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ಪ್ರದಾನ ಮಾಡುವರು.

ಈ ಸಮಾರಂಭಕ್ಕೆ ವಿಶೇಷ ಆಹ್ವಾನಿತರಾಗಿ ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಹಾಗೂ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಆಗಮಿಸುವರು. ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಟಿ. ಚೂರಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಂಸದ ರಮೇಶ ಜಿಗಜಿಣಗಿ, ಶಾಸಕರಾದ ಯಶವಂತರಾಯಗೌಡ ಪಾಟೀಲ, ಸಿ.ಎಸ್. ನಾಡಗೌಡ, ವಿಠ್ಠಲ ಕಟಕದೊಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಪಾಟೀಲ, ಪಿ.ಎಚ್. ಪೂಜಾರ, ಪಾಲಿಕೆ ಮೇಯರ್ ಮಹೆಜಬೀನ್ ಹೊರ್ತಿ, ನಗರಾಭಿವೃದ್ಧಿ ಪ್ರಾಕಾರದ ಅಧ್ಯಕ್ಷ ಕನ್ನಾನ್ ಮುಶ್ರೀಫ್ ಆಗಮಿಸುವರು.

ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ. ಎಂ.ಎಸ್. ಮದಭಾವಿ ಪತ್ರಿಕಾ ಕ್ಷೇತ್ರಕ್ಕೆ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಕೊಡುಗೆ ಕುರಿತು ಉಪನ್ಯಾಸ ನೀಡುವರು.

ಅತಿಥಿಗಳಾಗಿ ಜಿಲ್ಲಾಕಾರಿ ಟಿ. ಭೂಬಾಲನ್, ಜಿಪಂ ಸಿಇಒ ರಿಷಿ ಆನಂದ, ಎಸ್ಪಿ ಋಷಿಕೇಶ ಭಗವಾನ್, ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ, ರಾಜ್ಯ ಉಪಾಧ್ಯಕ್ಷ ಪುಂಡಲೀಕ ಬಾಳೋಜಿ ಹಾಗೂ ಚಾಣಕ್ಯ ಕರಿಯರ್ ಅಕಾಡೆಮಿ ಮುಖ್ಯಸ್ಥ ಎನ್.ಎಂ. ಬಿರಾದಾರ ಆಗಮಿಸುವರು.

ಸಂಘದ ಜಿಲ್ಲಾ ಹಾಗೂ ತಾಲೂಕು ಘಟಕಗಳ ಪದಾಕಾ–ರಿಗಳು, ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬಹುದಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಟಿ. ಚೂರಿ ಹಾಗೂ ಪ್ರಧಾನ ಕಾರ್ಯದರ್ಶಿ ಮೋಹನ ಪಿ. ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದ 'ಹಸಿರು ಸಿರಿ' ಉದ್ಘಾಟನೆ

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ :ಸಚಿವ ಎಂ.ಬಿ.ಪಾಟೀಲ

ಉದಯರಶ್ಮಿ ನ್ಯೂಸ್



ವಿಜಯಪುರ: ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯ ಜೊತೆಗೆ ಜವಾಬ್ದಾರಿಯೂ ಆಗಬೇಕು. ಪ್ರಕೃತಿಯನ್ನು ಕಾಪಾಡಿದರೆ ತಾಯಿಯನ್ನು ಕಾಪಾಡಿದಂತೆ, ಅದರಂತೆ ಪರಿಸರವನ್ನು ಸಂರಕ್ಷಿಸಬೇಕೆಂದು ಬಿ.ಎಲ್.ಡಿ.ಇ. ಸಂಸ್ಥೆಯ ಅಧ್ಯಕ್ಷರು ಮತ್ತು ಕರ್ನಾಟಕ ಸರ್ಕಾರ ಬೃಹತ್ ಕೈಗಾರಿಕೆ, ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವ ಡಾ ಎಂ.ಬಿ. ಪಾಟೀಲ ಹೇಳಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ನೂತನ ಆವರಣದಲ್ಲಿನ ಎಸ್. ಬಿ. ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದ ಆವರಣದಲ್ಲಿ ಮಹಾವಿದ್ಯಾಲಯದ ಐಕ್ಯೂಎಸಿ, ಹಸಿರು ಸಿರಿ ಘಟಕ, ವೃಕ್ಷ ಅಭಿಯಾನ ಪ್ರತಿಷ್ಠಾನ, ಮತ್ತು ಅರಣ್ಯ ಇಲಾಖೆ ಸಹಯೋಗದಲ್ಲಿ ಸಸಿ ನೆಡುವ ಮೂಲಕ 'ಹಸಿರು ಸಿರಿ' ಘಟಕ ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಅದರಂತೆಯೇ ಪ್ರಕೃತಿಯಿಂದಲೇ ಈ ಪ್ರಕೃತಿ. ಮಾನವನು ತನ್ನ ಪ್ರಕೃತಿಯನ್ನು ಕಾಪಾಡಿಕೊಂಡತೆ ಈ ಪರಿಸರ ಪ್ರಕೃತಿಯನ್ನು ಗಿಡ ನೆಡುವ ಮೂಲಕ ಉಳಿಸಿ ಬೆಳೆಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬರು ಒಂದೊಂದು ಗಿಡ ನೆಡುವ ಮೂಲಕ ಪರಿಸರವನ್ನು ಶುಭ್ರಗೊಳಿಸುವ ಕಾಯಕವನ್ನು ನಿರ್ವಹಿಸಬೇಕಾಗಿದೆ. ವಿದ್ಯಾರ್ಥಿಗಳು ಪ್ರತಿಯೊಬ್ಬರು ಒಂದೊಂದು ಗಿಡ ನೆಟ್ಟು ಈ ಮಹಾವಿದ್ಯಾಲಯದ ಆವರಣವನ್ನು ಹಾಗೂ ಸಮಾಜವನ್ನು ಸುಂದರವಾಗಿಸಿಕೊಳ್ಳುವ ಗುರುತರ ಜವಾಬ್ದಾರಿಯು ನಿಮ್ಮದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಆವರಣದಲ್ಲಿ ಅರಳಿ, ಆಲ, ಬೇವು, ನೆರಳೇ, ಹುಣಸೆ, ಸರಸ್ವತಿ ಸ್ವರೂಪ ಮತ್ತು ಸುವರ್ಣಕ ಮುಂತಾದ ಮೂವತ್ತಕ್ಕೂ ವಿವಿಧ ಪ್ರಭೇದಗಳನ್ನೊಳಗೊಂಡು ಒಟ್ಟು ಎರಡು ನೂರಕ್ಕೂ ಹೆಚ್ಚು ಸಸಿಗಳನ್ನು ನೆಡಲಾಯಿತು.

ಈ ಸಂದರ್ಭದಲ್ಲಿ ಎಸ್. ಬಿ. ಕಲಾ ಮತ್ತು ಕೆ. ಸಿ. ಪಿ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಆರ್. ಎಂ. ಮಿರ್ದೆ, ವೃಕ್ಷ ಅಭಿಯಾನ ಪ್ರತಿಷ್ಠಾನದ ಸಂಯೋಜಕ ಪ್ರೊ. ಮುರಗೇಶ. ಪಟ್ಟಣಶೆಟ್ಟಿ, ವಿಜಯಪುರ ವಲಯ ಅರಣ್ಯ ಅಧಿಕಾರಿ ಸಂತೋಷಕುಮಾರ ಅಜುರ, ಐಕ್ಯೂಎಸಿ ನಿರ್ದೇಶಕರಾದ ಡಾ. ಪಿ. ಎಸ್. ಪಾಟೀಲ, 'ಹಸಿರು ಸಿರಿ' ಘಟಕ ಸಂಯೋಜಕರಾದ ಪ್ರೊ. ಕೃಷ್ಣಾ ಮಂಡ್ಲಾ, ಡಾ. ಕೆ. ಮಹೇಶಕುಮಾರ, ಪಿಯುಸಿ ಪ್ರಾಚಾರ್ಯರಾದ ಪ್ರೊ. ಸಿ. ಬಿ. ಪಾಟೀಲ, ಡಾ. ಅನೀಲ. ನಾಯಕ, ಡಾ. ಶ್ರೀನಿವಾಸ ದೊಡ್ಡಮನಿ, ಶ್ರೀ. ಎಸ್. ಕೆ. ಪಾಟೀಲ, ಡಾ. ಮಂಜುನಾಥ. ಜ್ಯೋತಿ, ಡಾ. ಶ್ರೀಶೈಲ.ಉಂಕಿ, ಮಲಿಕ್ ಎಲ್ ಜಮಾದಾರ, ಅಕ್ಷಯ ಜನಾಯ ಮತ್ತು ಮಹಾವಿದ್ಯಾಲಯದ ಬೋಧಕ & ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಯೋಧರನ್ನು ಗೌರವಿಸುವ ಕಾರ್ಯ ನಮ್ಮೆಲ್ಲರಿಂದ ಆಗಬೇಕು :ಕೋರಿ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ತನ್ನ ದೇಶಕ್ಕೆ ಮತ್ತು ದೇಶ ಕಾಯುವ ಸೈನಿಕರಿಗೆ ಗೌರವ ಕೊಡುವ ಜನತೆ ಇರುವವರೆಗೂ ಆ ದೇಶ ಎಂದಿಗೂ ಸೋಲುವದಿಲ್ಲ ಎಂದು ತಾಲೂಕಿನ ಢವಳಗಿ ಗ್ರಾಮದ ನಿವೃತ್ತ ನೌಕಾಪಡೆಯ ಪ್ರಥಮ ಮಹಿಳಾ ಅಧಿಕಾರಿ ಮತ್ತು ಸದ್ಯ ಮಹಾರಾಷ್ಟ್ರ ಸಿವಿಲ್ ಡಿಫೆನ್ಸ್ ಅಧಿಕಾರಿಯಾಗಿ ಸೇವೆಯಲ್ಲಿರುವ ರಾಜೇಶ್ವರಿ ಕೋರಿ ಹೇಳಿದರು.

ಪಟ್ಟಣದ ಹಳೆಯ ತಹಶೀಲ್ದಾರ ಕಚೇರಿಯ ಬಳಿ ಇರುವ ಸೈನಿಕ ಮೈದಾನದಲ್ಲಿ ಕಾರ್ಗಿಲ್ ವೀರಯೋಧರ ಸ್ಮಾರಕ ನಿರ್ಮಾಣ ಸಮಿತಿಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 25ನೇ ವರ್ಷದ ಕಾರ್ಗಿಲ್ ವಿಜಯೋತ್ಸವ ಸಮಾರಂಭದ ಅತಿಥಿಯಾಗಿ ಅವರು ಮಾತನಾಡಿದರು.

ಈ ವೇಳೆ ತಾಲೂಕಿನ ಬಳವಾಟ ಗ್ರಾಮದ ಲೆಫ್ಟಿನಂಟ್ ಕರ್ನಲ್ ಆಗಿ ಸೇವೆಯಲ್ಲಿರುವ ಶಿವಾನಂದ ಬಿರಾದಾರ ಮಾತನಾಡಿ, ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣ ನೀಡಿದ ವೀರಯೋಧ ದವಲಸಾಬ ಕಂಬಾರ ಅವರ ಸ್ಮಾರಕ ನಿರ್ಮಿಸಿದ ಸಮಿತಿಯವರ ದೇಶಪ್ರೇಮ ಮೆಚ್ಚುವಂಥ–'ದ್ದು. ದೇಶಕ್ಕಾಗಿ ಪ್ರಾಣ ನೀಡಿದ ವೀರ ಯೋಧರ ಕುಟುಂದವರು ಸರ್ಕಾರದಿಂದ ವಿವಿಧ' ಯೋಜನೆಗಳನ್ನು ನೀಡಲಾಗುತ್ತದೆ. ಅವುಗಳ ಸದ್ಬಳಕೆಗೆಯಾಗಬೇಕು ಎಂದರು.

ಯಂಕಂಚಿ ಹಿರೇಮಠದ ಅಭಿನವ ರುದ್ರಮುನಿ ಶಿವಾಚಾರ್ಯರು ಮಾತನಾಡಿ ಗಡಿಯಲ್ಲಿ ಯೋಧರು ಸಲ್ಲಿಸುತ್ತಿರುವ ಸೇವೆಯಿಂದ ನಾವು ಊರಲ್ಲಿ ಸುಖವಾಗಿ ಮೂರು ಹೊತ್ತು ಊಟ ಮತ್ತು ಕಣ್ತುಂಬ ನಿದ್ದೆ ಮಾಡುತ್ತಿದ್ದೇವೆ. ಯೋಧರನ್ನು ಗೌರವಿಸುವ ಕಾರ್ಯ ನಮ್ಮೆಲ್ಲ–ರಿಂದ ಆಗಬೇಕು ಎಂದರು.

ಕರ್ನಲ್ ಸತೀಶ ದೇಶಪಾಂಡೆ, ಪುರಸಭೆ ಮುಖ್ಯಾಧಿಖಾರಿ ಮಲ್ಲನಗೌಡ ಬಿರಾದಾರ, ಸಮಿತಿಯ ಸಂಸ್ಥಾಪಕ ಗೌರವಾಧ್ಯಕ್ಷ ಬಸವರಾಜ ನಂದಿಕೇಶ್ವರಮಠ ಮಾತನಾಡಿದರು. ತಹಶೀಲ್ದಾರ ಬಲರಾಮ ಕಟ್ಟಿಮನಿ ವಿಜಯ ದಿವಸ ಆಚರಣೆಗೆ ಚಾಲನೆ ನೀಡಿದರು. ತಾಳಿಕೋಟೆಯ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಸಿದ್ಧಲಿಂಗ ದೇವರು ಸಾನಿಧ್ಯ ವಹಿಸಿದ್ದರು. ಪಿಎಸ್ಐ ಸಂಜಯ ತಿಪರೆಡ್ಡಿ, ಶಿರಸ್ತೇದಾರ ಎಂ.ಎ.ಬಾಗೇವಾಡಿ, ಸಮಿತಿಯ ಅಧ್ಯಕ್ಷ ಚಂದ್ರಶೇಖರ ಕಲಾಲ, ಸದಸ್ಯರಾದ ರವೀಂದ್ರ ಬಿರಾದಾರ, ಉದಯ ರಾಯಚೂರ, ಹಣಮಂತ ನಲವಡೆ, ಶ್ರೀಕಾಂತ ಹಿರೇಮಠ, ರಾಜು ಹೊಳಿ, ನಬೀಸಾ ನದಾಫ್, ಸೋಮನಗೌಡ ಬಿರಾದಾರ, ರಾಜು ಬಳ್ಳೊಳ್ಳಿ ಸೇರಿದಂತೆ ಮತ್ತೀತರರು ಇದ್ದರು.



ಕಾರ್ಯಕ್ರಮಕ್ಕೂ ಮೊದಲು ತಾಲೂಕಿನ ವೀರಯೋಧರ ಮನೆಗಳಿಂದ ಹುತಾತ್ಮ ವೀರಯೋಧರ ಜ್ಯೋತಿಗಳನ್ನು ಭಾವಚಿತ್ರ ಸಮೇತ ಪಟ್ಟಣದ ದಾವಲಸಾಬ ಕಂಬಾರ ಅವರ ಮನೆಯಿಂದ ಎಂ.ಜಿ.ವ್ಹಿ.ಸಿ ಕಾಲೇಜು, ಅಂಬೇಡ್ಕರ್ ವೃತ್ತ, ಕಿತ್ತೂರು ರಾಣಿ ಚನ್ನಮ್ಮ ವೃತ್ತ, ಬಸವೇಶ್ವರ ವೃತ್ತ, ಗಾಂಧಿ ರಸ್ತೆ ಮಾರ್ಗವಾಗಿ ಭವ್ಯ ಮೆರವಣಿಗೆ ನಡೆಸಲಾಯಿತು.

ಮೆರವಣಿಗೆಯ ಉದ್ದಕ್ಕೂ ದೇಶ ಭಕ್ತಿ ಚಟುವಟಿಕೆಗಳು ಮತ್ತು ಶಾರದಳ್ಳಿ ಸ್ಕೆಟಿಂಗ್ ಮತ್ತು ಕರಾಟೆ ತರಬೇತಿಯ ವಿದ್ಯಾರ್ಥಿಗಳು ತ್ರಿವರ್ಣ ಧ್ವಜ ಸಮೇತ ಮೆರವಣಿಯಲ್ಲಿ ಭಾಗಿಯಾಗಿದ್ದು ಗಮನ ಸೆಳೆದವು.

# ಪ್ರವಾಹ ಮುಂಜಾಗ್ರತಾ ಕ್ರಮ: ಡಿಸಿ ಟಿ.ಭೂಬಾಬಲ್ ಪರಿಶೀಲನೆ

ಉದಯರಶ್ಮಿ ನ್ಯೂಸ್




ಮುದ್ದೇಬಿಹಾಳ: ಪ್ರವಾಹ ಮುಂಜಾಗ್ರತಾ ಕ್ರಮವಾಗಿ ತಾಲೂಕಿನ ಕಾಳಗಿ ಗ್ರಾಮ ಮತ್ತು ಮುದೂರ ಗ್ರಾಮಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಬಲ್ ಭೇಟಿ ನೀಡಿ ಪರಿಶೀಲಿಸಿದರು.

ನದಿ ಸಮೀಪ ಗ್ರಾಮಸ್ಥರು ಹೋಗದಂತೆ, ದನಕರುಗಳನ್ನು ಬಿಡದಂತೆ ಸಾರ್ವಜನಿಕರಿಗೆ ಮುನ್ನೆಚ್ಚ–ರಿಕೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಗಂಜೀ ಕೇಂದ್ರಗಳನ್ನು ಶುದ್ಧಗೊಳಿಸುವಂತೆ, ಸೊಳ್ಳೆಗಳ ನಿಯಂತ್ರಣಕ್ಕಾಗಿ ಫಾಗಿಂಗ್ ಮಾಡಿಸುವಂತೆ ಸೂಚಿಸಿದರು.

ಈ ವೇಳೆ ಸಿಪಿಓ ನಿಂಗಪ್ಪ ಗೋಟೆ, ತಾಲೂಕು ನೂಡಲ ಶಂಕರಗೌಡ ಸೋಮನಾಳ, ತಹಶೀಲ್ದಾರ ಬಲರಾಮ ಕಟ್ಟೀಮನಿ, ತಾಪಂ ಇಓ ಆರ್. ಎಸ್. ಹಿರೇಗೌಡರ, ಸಹಾಯಕ ನಿರ್ದೇಶಕ ಖುಬಾಸಿಂಗ್ ಜಾಧವ ಸೇರಿದಂತೆ ಮತ್ತೀತರರು ಇದ್ದರು.

# ಕಡಕೋಳ ವೀರೇಶ್ವರ ಶಿವಯೋಗಿಗಳ ಪುಣ್ಯಾರಾಧನೆ ಇಂದು


ಉದಯರಶ್ಮಿ ನ್ಯೂಸ್



ಬ್ರಹ್ಮದೇವನಮಡು: ಸಮೀಪದ ಕಡಕೋಳ ಮಡಿವಾಳೇಶ್ವರ ಮಹಾಮಠದ ವೀರೇಶ್ವರ ಶಿವಯೋಗಿಗಳ 35ನೇ ಪುಣ್ಯಾರಾಧನೆ ಮಹೋತ್ಸವ ನಿಮಿತ್ಯ ಜು.28 ರಂದು ಶ್ರೀಮಠದಲ್ಲಿ ವಿವಿಧ ಧಾಮಿ9ಕ ಕಾಯ9ಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಹಾಮಠದ ಡಾ.ರುದ್ರಮುನಿ ಶಿವಾಚಾಯ9ರು ತಿಳಿಸಿದ್ದಾರೆ. ಭಾನುವಾರ ಬೆಳಗ್ಗೆ 7ಕ್ಕೆ ಶ್ರೀ ಮಡಿವಾಳೇಶ್ವರರ ಕತೃ9 ಗದ್ದುಗೆಗೆ ರುದ್ರಾಭಿಷೇಕ,ಸಹಸ್ರ ಬಿಲ್ವಾಚ9ನೆ ಹಾಗೂ ಸಂಜೆ 4 ಗಂಟೆಗೆ ಶ್ರೀ ವೀರೇಶ್ವರ ಶಿವಯೋಗಿಗಳ ಕತೃ9 ಮೂತಿ9ಗೆ ರುದ್ರಾಭಿಷೇಕ,ಸಹಸ್ರ ಬಿಲ್ವಾಚ9ನೆ ಮಹಾಮಂಗಳಾರತಿ ನಂತರ ಮಹಾ ಪ್ರಸಾದ ನಡೆಯಲಿದೆ. ರಾತ್ರಿ 8ಕ್ಕೆ ಶ್ರೀಮಠದ ಆವರಣದಲ್ಲಿ ಗುರುವಂದನಾ ಕಾಯ9ಕ್ರಮ,ಧಮ9ಸಭೆ ಹಾಗೂ ಮಹಾಪುರಾಣ ದ್ವಿತೀಯ ಮುದ್ರಣ ಲೋಕಾಪ9ಣೆ ಸಮಾರಂಭ ನಡೆಯುವದು. ಕಾಯ9ಕ್ರಮದಲ್ಲಿ ವಿವಿಧ ಮಠಾಧೀಶರು, ರಾಜ–ಕಾರಣಿಗಳು, ಸಾಹಿತಿಗಳು ಸೇರಿದಂತೆ ಮತ್ತಿತ್ತರರು ಭಾಗವಹಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಭಾಗವಹಿಸಿ ಗುರುಗಳ ಕೃಪೆಗೆ ಪಾತ್ರರಾಗಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಲ್ಲಿ ದೇಶಾಭಿಮಾನ ಹಾಗೂ ದೇಶಭಕ್ತಿಯನ್ನು ಬೆಳಸಿ :ಡಾ.ಸುಧಾ

ಉದಯರಶ್ಮಿ ನ್ಯೂಸ್




ಇಂಡಿ: ಕಾರ್ಗಿಲನಲ್ಲಿ ಹೋರಾಡಿ ಮಡಿದ ವೀರ ಯೋಧರನ್ನು ಸ್ಮರಿಸಬೇಕು. ಶಿಕ್ಷಕರು ಪಾಠದ ಜೊತೆಗೆ ವೀರ ಯೋಧರ ಕಥ–'ಗಳನ್ನು ಹೇಳಬೇಕು ಇದರಿಂದ ಮಕ್ಕಳಲ್ಲಿ ದೇಶಾಭಿಮಾನ, ಹಾಗೂ ದೇಶಭಕ್ತಿಯನ್ನು ಬೆಳಸಲು ಸಾಧ್ಯಎಂದು ಪ್ರಾಚಾರ್ಯ ಡಾ ಸುಧಾ ಸುಣಗಾರ ಹೇಳಿದರು.

ಪಟ್ಟಣದ ಕರ್ನಾಟಕ ಟೀಚರ್ಸ್ ಬಿ.ಈಡಿ ಕಾಲೇಜ್ ಕಾರ್ಗಿಲ್ ವಿಜಯೋತ್ಸವ 25ನೇ ವರ್ಷದ ರಜತ ಮಹೋತ್ಸವವನ್ನು ಆಚ–ರಿಣೆಯಲ್ಲಿ ಮಾತನಾಡಿದರು.

ಪ್ರೊ ಸಿ ಎಸ್ ಪೂಜಾರಿ, ಪ್ರಶಿಕ್ಷಣಾರ್ಥಿಯಾದ ತುಕಾರಾಮ ಹೊನ್ನಕೋರೆ, ಕಾವ್ಯ, ರುದ್ರಯ್ಯ ಹಿರೇಮಠ, ಯಾಸಿನ್ ಉಮ್ಮಾಪುರ, ಆನಂದ ಬಲಗೇರಿ, ಅರ್ಚನಾ ಮಾತನಾಡಿದರು.

ಉಪನ್ಯಾಸಕರಾದ ಪ್ರೊ ಬಿ. ಕೆ ಉಕುಮನಾಳ. ಪ್ರೊ ಸಿ ಎಸ್ ಪೂಜಾರಿ. ಎಸ್ ಎಸ್ ಉಟಗಿ ಪ್ರೊ ಡಿ ಎಸ್ ಮಠಪತಿ. ಉಪಸ್ಥಿತರಿದ್ದರು ಹಾಗೂ ಎಲ್ಲಾ ಪ್ರಶಿಕ್ಷಣಾರ್ಥಿಗಳು. ಕಾರ್ಯಕ್ರಮದಲ್ಲಿ ಬಾಗವಹಿಸಿದರು. ದೇಶಭಕ್ತಿಯ ಗೀತೆ ಯೊಂದಿಗೆ ಯೋಧರಿಗೆ ಗೌರವ ನಮನಗಳನ್ನು ಸಲ್ಲಿಸಲಾಯಿತು.

# ಜು.28 ರಂದು ರುದ್ರಭೂಮಿ ಸ್ವಚ್ಛತಾ ಕಾರ್ಯಕ್ರಮ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಜು.28 ರಂದು ಪ್ರತೀ ಭಾನುವಾರದಂತೆ ಬೆಳಿಗ್ಗೆ 7ಗಂಟೆಯಿಂದ ಪಟ್ಟಣದ ಆಲಮಟ್ಟಿ ರಸ್ತೆಯಲ್ಲಿರುವ ವೀರಶೈವ ಲಿಂಗಾಯತ ಸಮಾಜದ ರುದ್ರಭೂಮಿ ಸ್ವಚ್ಛತಾ ಕಾರ್ಯಕ್ರಮ ನಡೆಲಿದೆ. ಬಳಿಕ ಶ್ರಾವಣ ಮಾಸದ ಮೊದಲ ಸೋಮುವಾರ ದಿನದಂದು ಸೂಕ್ಷೇತ್ರ ಕೂಡಲ ಸಂಗಮನಾಥನ ದರ್ಶನಕ್ಕೆ ಪಾದಯಾತ್ರೆ ಹಮ್ಮಿಕೊಳ್ಳುವ ಕುರಿತು ಚರ್ಚಿಸಲಿದ್ದು ಸಮಾಜದ ಎಲ್ಲ ಬಾಂಧವರು ಪಾಲ್ಗೊಳ್ಳುವಂತೆ ಸಮಾಜದ ಅಧ್ಯಕ್ಷ ಪ್ರಭುರಾಜ ಕಲಬುರ್ಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR